
ಯುವ ಸ್ಫೂರ್ತಿ



ಅದೃಷ್ಟ ಎಂದರೆ ಅವಕಾಶವನ್ನು ಪಡೆಯುವವನು,ಬುದ್ಧಿವಂತ ಎಂದರೆ ಅವಕಾಶವನ್ನು ಸೃಷ್ಟಿಸಿಕೊಳ್ಳುವವನು.
–ಸ್ವಾಮಿ ವಿವೇಕಾನಂದ

MAA ಫ್ರೆಂಡ್ಸ್ ಸಾರಥ್ಯದಲ್ಲಿ...

# ಯುವ ಮಾರ್ಗ

YUVA MARGA NEWS PAPER – VOICE OF THE NATION

ಕನ್ನಡ ದಿನಪತ್ರಿಕೆ "ಇದು ರಾಷ್ಟ್ರದ ಧ್ವನಿ"

YUVA MARGA KANNADA DAILY NEWS PAPER

ಸಂಪಾದಕರು : ಅನಿಲ ಕುಮಾರ್ ಹೆಚ್
Cell : 9743497111

ಪ್ರಧಾನ ಸಂಪಾದಕರು : ಮನೋಜ ಮಿಶ್ರಾ
Cell : 9743496111

ಸಂಪುಟ: 04 | ಸಂಚಿಕೆ : 200 | ಶನಿವಾರ : 24-05-2025 | ರಾಯಚೂರು | RNI NO: KARKAN/2022/90446 | ಪುಟ: 4 | ಬೆಲೆ: ರೂ: 2-00

VOLUME: 04 | ISSUE: 200 | SATURDAY : 24-05-2025 | RAICHUR | EMAIL: YUVAMARGA@GMAIL.COM | PAGE: 4 | PRICE: Rs: 2-00


## ಜಾಮೀನು ದೊರೆತ ಬೆನ್ನಿಗೆ ಅತ್ಯಾಚಾರ ಆರೋಪಿಗಳ ವಿಜಯೋತ್ಸವ

**ಬೆಂಗಳೂರು, ಮೇ.24**–ಹಾನಗಲ್ ಗ್ಯಾಂಗ್ ರೇಪ್ ಪ್ರಕರಣದ ಪ್ರಮುಖ ಏಳು ಆರೋಪಿಗಳಿಗೆ ಜಾಮೀನು ದೊರೆತ ಬೆನ್ನಿಗೆ, ಐದು ಕಾರುಗಳಲ್ಲಿ 20ಕ್ಕೂ ಹೆಚ್ಚು ಹಿಂಬಾಲಕರೊಂದಿಗೆ ವಿಜಯೋತ್ಸವ ರೀತಿಯಲ್ಲಿ ಮೆರವಣಿಗೆ ನಡೆಸಿರುವುದಕ್ಕೆ ತೀವ್ರ ಆಕ್ರೋಶಕ್ಕೆ ಕಾರಣವಾಗಿದೆ.

ಮೂರು ದಿನಗಳ ಹಿಂದೆ ಹಾವೇರಿ ಜಿಲ್ಲೆಯ ಅಕ್ಕಿ ಆಲೂರು ಪಟ್ಟಣದಲ್ಲಿ ವಿಜಯೋತ್ಸವದ ರೋಡ್ ಶೋ ನಡೆದಿದ್ದು, ವೀಡಿಯೊಗಳು ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿದ್ದು, ಕ್ರಮ ಕೈಗೊಳ್ಳುವಂತೆ ಸಾರ್ವಜನಿಕರು ಒತ್ತಾಯಿಸಿದ್ದಾರೆ.

ಕಳೆದ ಮೂರು ದಿನಗಳ ಹಿಂದೆ, ಹಾವೇರಿ ಸಬ್ ಜೈಲಿನಿಂದ ಜಾಮೀನಿನ ಮೇಲೆ ಬಿಡುಗಡೆಯಾದ ಸಾಮೂಹಿಕ ಅತ್ಯಾಚಾರ ಪ್ರಕರಣದ ಆರೋಪಿಗಳಾದ ಅಫ್ತಾದ್‌ಚಂದನ ಕಟ್ಟಿ,



ಮದರ್‌ಸಾಬ್ ಮಂಡಕ್ಕಿ, ಸಮಿವುಲ್ಲ ಲಾಲನವರ್, ಮೊಹ್ಮದ್ ಸಾದಿಕ್ ಅಗಸಿನಿ, ಶೋಯಿಬ್‌ಮುಲ್ಲ,

2ನೇ ಪುಟಕ್ಕೆ

## ಜಿಲ್ಲಾ ನೌಕರರ ಸಂಘದ ಅಧ್ಯಕ್ಷರ ಮೇಲಿನ ಅವಮಾನ ಖಂಡಿಸಿ ಮನವಿ ಸಲ್ಲಿಕೆ

ಯುವ ಮಾರ್ಗ ಸುದ್ದಿ

**ಮಾನ್ವಿ,ಮೇ.24**–ಜಿಲ್ಲಾ ನೌಕರರ ಸಂಘದ ಅಧ್ಯಕ್ಷರಾದ ಕೃಷ್ಣ ಶಾವಂತಗೇರಿ ಅವರ ಮೇಲೆ ನಡೆದ ಅವಮಾನವನ್ನು ಖಂಡಿಸಿ, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ತಾಲೂಕು ಘಟಕವು ತಹಶೀಲ್ದಾರ್ ಮೂಲಕ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಲಾಯಿತು.



ಘಟನೆ ಕುರಿತು ಮಾತನಾಡಿದ ತಾಲೂಕು ಸರ್ಕಾರಿ ನೌಕರರ ಸಂಘದ ಅಧ್ಯಕ್ಷರಾದ ಸುರೇಶ ಕುರ್ಡಿ, ಮೇ 22ರಂದು ಮಾನ್ವಿ ಪಟ್ಟಣದಲ್ಲಿ ರೈತ ಸಂಘದಿಂದ ಜೋಳ ಖರೀದಿ ಕುರಿತು ನಡೆದ ಪ್ರತಿಭಟನೆಯ ಸಂದರ್ಭದಲ್ಲಿ ಈ ಘಟನೆ ನಡೆದಿದೆ ಎಂದು ತಿಳಿಸಿದರು. ರೈತರಿಂದ ಮನವಿ ಸ್ವೀಕರಿಸಲು ಆಗಮಿಸಿದ್ದ ಜಿಲ್ಲಾ ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಯ ಉಪನಿರ್ದೇಶಕರು ಹಾಗೂ ಜಿಲ್ಲಾ ನೌಕರರ ಸಂಘದ ಅಧ್ಯಕ್ಷರಾದ ಕೃಷ್ಣಶಾವಂತಗೇರಿ ಅವರನ್ನು ರೈತ ಸಂಘದ ರಾಜ್ಯ ಗೌರವಾಧ್ಯಕ್ಷರಾದ ಚಾಮರಸ ಮಾಲಿಪಾಟೀಲ್ ಬೆಟ್ಟದೂರು ಅವರು ಅವಾಚ್ಯ ಶಬ್ದಗಳಿಂದ ನಿಂದಿಸಿ, ತಳ್ಳಿದ್ದಾರೆ. ಈ ಕೃತ್ಯವನ್ನು ತಾಲೂಕು ನೌಕರರ ಸಂಘವು ತೀವ್ರವಾಗಿ ಖಂಡಿಸಿದ್ದು, ತಪ್ಪಿತಸ್ಥರ ವಿರುದ್ಧ ಕಾನೂನು

2ನೇ ಪುಟಕ್ಕೆ

## 'ಜಲ ಸಿಂಚನ ಜಲ ಭಾಗಿದಾರ' ಯೋಜನೆ ಕಾಮಗಾರಿ ಪರಿಶೀಲಿಸಿದ ಕೇಂದ್ರ ತಂಡ

ಯುವ ಮಾರ್ಗ ಸುದ್ದಿ

**ಮಾನ್ವಿ,ಮೇ.24**–ತಾಲ್ಲೂಕಿನ ಗೋರ್ಕಲ್ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಭಾರತ ಸರ್ಕಾರದ ಜಲ ಶಕ್ತಿ ಸಚಿವಾಲಯದ ಕೇಂದ್ರ ನೋಡಲ್ ಅಧಿಕಾರಿ ಸಿ.ಸತ್ಯಮೂರ್ತಿ ಅವರು 'ಜಲ ಸಿಂಚನ ಜಲ ಭಾಗಿದಾರ' ಯೋಜನೆಯಡಿ ಕೈಗೊಂಡಿರುವ ವಿವಿಧ ಕಾಮಗಾರಿಗಳನ್ನು ವೀಕ್ಷಿಸಿ ಪರಿಶೀಲನೆ ನಡೆಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಸತ್ಯಮೂರ್ತಿ, 'ಜಲ ಸಿಂಚನ ಜಲ ಭಾಗಿದಾರ' ಯೋಜನೆಯಡಿ ಹಳ್ಳ, ಕೆರೆ, ಮತ್ತು ನಾಲಾ ಹೂಳೆತ್ತುವ



ಕಾಮಗಾರಿಗಳನ್ನು ಕೈಗೊಳ್ಳುವುದರಿಂದ ರೈತರ ಜಮೀನುಗಳಿಗೆ ನೀರು ಪೂರೈಸುವ ನಾಲೆಗಳು ಸ್ವಚ್ಛವಾಗಿ, ಕಾಲುವೆಗಳ ಮೂಲಕ ನೀರು ಸುಲಭವಾಗಿ ಹರಿಯಲು ಸಾಧ್ಯವಾಗುತ್ತದೆ. ಇದರಿಂದ ರೈತರಿಗೆ ಬೆಳೆ ಬೆಳೆಯಲು ಅನುಕೂಲವಾಗುತ್ತದೆ. ಆದ್ದರಿಂದ ಸಮರ್ಪಕವಾಗಿ ಕಾಮಗಾರಿಯನ್ನು ಕೈಗೊಳ್ಳುವಂತೆ ಅವರು ಸೂಚಿಸಿದರು.

ಗೋರ್ಕಲ್ ಗ್ರಾಮ ಪಂಚಾಯಿತಿಯಿಂದ 2023–24ನೇ ಸಾಲಿನಲ್ಲಿ ನರೇಗಾ ಯೋಜನೆಯಡಿ ಕೈಗೊಂಡಿರುವ ಗ್ರಾಮದ ಅಡವಿ ಖಾನಾಪುರ್ ದಾರಿಯಿಂದ ಡಾಕ್ಟರ್ ಮನೆ ಈರಣ್ಣ ಹೊಲದವರೆಗಿನ ನಾಲಾ ಹೂಳೆತ್ತುವ ಕಾಮಗಾರಿಯನ್ನು ಕೇಂದ್ರ ತಂಡ ವೀಕ್ಷಿಸಿತು. ಜೊತೆಗೆ, ಗ್ರಾಮದಲ್ಲಿ 2023–24 ಮತ್ತು 2024–25ನೇ ಸಾಲಿನಲ್ಲಿ ಕೈಗೊಳ್ಳಲಾಗಿರುವ ಹಳ್ಳ, ಕೆರೆ ಮತ್ತು ನಾಲಾ ಹೂಳೆತ್ತುವ ಕಾಮಗಾರಿಗಳನ್ನು ವೀಕ್ಷಿಸಿ, ಕಾಮಗಾರಿ ಕಡತಗಳನ್ನು ಪರಿಶೀಲಿಸಲಾಯಿತು.

ತಾಲ್ಲೂಕು ಪಂಚಾಯಿತಿ

2ನೇ ಪುಟಕ್ಕೆ

## ನ್ಯಾಷನಲ್ ಹೆರಾಲ್ಡ್‌ಗೆ ದೇಣಿಗೆ, ಡಿಕೆಶಿ ಮೇಲೆ ಆರೋಪ

**ನವದೆಹಲಿ.ಮೇ.24**–ನ್ಯಾಷನಲ್ ಹೆರಾಲ್ಡ್ ಪ್ರಕರಣ ಈಗ ಡಿಕೆ ಬ್ರದರ್ಸ್ ಬುಡಕ್ಕೆ ಬಂದಿದೆ. ಯಂಗ್ ಇಂಡಿಯಾಗೆ ಡಿಕೆ ಶಿವಕುಮಾರ್ ಮತ್ತು ಡಿಕೆ ಸುರೇಶ್ 2.5 ಕೋಟಿ ರೂ. ದೇಣಿಗೆ ನೀಡಿದ್ದಾರೆ ಎಂದು ಜಾರಿ ನಿರ್ದೇಶನಾಲಯ (ಇಡಿ ) ಹೇಳಿದೆ.

ನ್ಯಾಷನಲ್ ಹೆರಾಲ್ಡ್ ಅಕ್ರಮ ಹಣ ವರ್ಗಾವಣೆ ಪ್ರಕರಣಕ್ಕೆ ಸಂಬಂಧಿಸಿದಂತೆ ಇಡಿ ಕೋರ್ಟ್‌ಗೆ ಹೆಚ್ಚುವರಿ ಚಾರ್ಜ್‌ಶೀಟ್ ಸಲ್ಲಿಸಿದೆ. ಹೆಚ್ಚುವರಿ ಜಾರ್ಜ್‌ಶೀಟ್‌ನಲ್ಲಿ ಡಿಕೆ ಬ್ರದರ್ಸ್ ಹೆಸರು ಉಲ್ಲೇಖಿಸಲಾಗಿದೆ.

ತೆಲಂಗಾಣ ಸಿಎಂ ರೇವಂತ್ ರೆಡ್ಡಿ ಅವರು ದೇಣಿಗೆ ನೀಡಿದ್ದಾರೆ. ಹೈಕಮಾಂಡ್ ಸೂಚನೆ ಮೇರೆಗೆ ದೇಣಿಗೆ ನೀಡಲಾಗಿದೆ ಎಂದು ಇಡಿ ಆರೋಪಿಸಿದೆ. ಸೋನಿಯಾ ಗಾಂಧಿ ಮತ್ತು ರಾಹುಲ್ ಗಾಂಧಿ 142 ಕೋಟಿ ರೂ. ಹಣವನ್ನು ದುರ್ಬಳಕೆ ಮಾಡಿದ್ದಾರೆ ಎಂದು ಈ ಮೊದಲು ಇಡಿ ಆರೋಪಿಸಿತ್ತು.

**ಏನಿದು ಪ್ರಕರಣ?:** ಕ್ರಿಮಿನಲ್ ಪಿತೂರಿ ನಡೆಸಿ ಅಸೋಸಿಯೇಟೆಡ್ ಜರ್ನಲ್ಸ್ ಲಿಮಿಟೆಡ್‌ನ (ಎಜೆಎಲ್) ಸಾವಿರಾರು ಕೋಟಿ ಮೌಲ್ಯದ ಆಸ್ತಿಯನ್ನು ಸೋನಿಯಾ ಗಾಂಧಿ, ರಾಹುಲ್ ಗಾಂಧಿ, ಸ್ಯಾಮ್ ಪಿತ್ರೊಡಾ, ಸುಮನ್ ದುಬೆ ಮತ್ತು ಇತರ ಕಾಂಗ್ರೆಸ್ ನಾಯಕರು ಪಡೆದಿದ್ದಾರೆ.

ಯಂಗ್ ಇಂಡಿಯನ್ ಲಿಮಿಟೆಡ್ ಮೂಲಕ 2,000 ಕೋಟಿ ರೂ. ಮೌಲ್ಯದ ಆಸ್ತಿಯನ್ನು ಸೋನಿಯಾ ಮತ್ತು ರಾಹುಲ್ ಅವರು ಕೇವಲ 50 ಲಕ್ಷ ರೂ.ಗೆ ಖರೀದಿಸಿದ್ದಾರೆ. ಕಾಂಗ್ರೆಸ್ ಪಕ್ಷವು ಎಜೆಎಲ್‌ಗೆ ನೀಡಿದ್ದ 90.2 ಕೋಟಿ ರೂ. ಸಾಲವನ್ನು

2ನೇ ಪುಟಕ್ಕೆ

## ಪುರಸಭೆ ಅಭಿವೃದ್ಧಿ ಕಾಮಗಾರಿಗಳಲ್ಲಿ ವಿಳಂಬ: ಸಾರ್ವಜನಿಕರ ಆಕ್ರೋಶ

ಯುವ ಮಾರ್ಗ ಸುದ್ದಿ

**ಮಾನ್ವಿ,ಮೇ.24**– ಆರು ತಿಂಗಳ ಹಿಂದೆ ಸಚಿವರು, ಶಾಸಕರು ಮತ್ತು ಕಾಂಗ್ರೆಸ್ ಮುಖಂಡರಿಂದ ಅದ್ದೂರಿಯಾಗಿ ಗುದ್ದಲಿ ಪೂಜೆ ನೆರವೇರಿಸಿದ್ದ ಕಾಮಗಾರಿಗಳು ಆಮೆಗತಿಯಲ್ಲಿ ಸಾಗುತ್ತಿದ್ದು, ಸಾರ್ವಜನಿಕರಲ್ಲಿ ತೀವ್ರ ಅಸಮಾಧಾನ ಮೂಡಿಸಿದೆ. ಅದರಲ್ಲೂ ಕೊನಾಪುರಪೇಟೆಯ ಸಿಟ್ಟಿನದೇವರ ಗುಡಿಯ ಮುಂದೆ ಸಿಮೆಂಟ್ ಬ್ಲಾಕ್‌ಗಳು ಮತ್ತು ಕಂಕರ್ ಪುಡಿಯನ್ನು ರಾಶಿ ಹಾಕಿ ತಿಂಗಳುಗಳೇ ಕಳೆದರೂ ಕೆಲಸ ಪ್ರಾರಂಭಿಸದೆ ಇರುವುದು ಸ್ಥಳೀಯರ ಆಕ್ರೋಶಕ್ಕೆ ಕಾರಣವಾಗಿದೆ. ಮಳೆಯಿಂದಾಗಿ ರಸ್ತೆ ಕೆಸರುಮಯವಾಗಿದ್ದು, ಸಂಚಾರಕ್ಕೆ ತೀವ್ರ ತೊಂದರೆಯಾಗುತ್ತಿದೆ ಎಂದು ನಿವಾಸಿಗಳು ಗೋಳು ತೋಡಿಕೊಂಡಿದ್ದಾರೆ. ಈ ಕುರಿತು ವಾರ್ಡ್ ಸದಸ್ಯರನ್ನು ಸಂಪರ್ಕಿಸಿದಾಗ,"ಹೇಳಿ ಹೇಳಿ



ಸಾಕಾಗಿದೆ, ಏನು ಮಾಡಬೇಕು ಅಂತಾನೇ ಗೊತ್ತಾಗುತ್ತಿಲ್ಲ" ಎಂದು ಅಸಹಾಯಕತೆ ವ್ಯಕ್ತಪಡಿಸಿದ್ದಾರೆ.

**ಕತ್ತಲಲ್ಲಿ ಮುಳುಗಿದ ವಾರ್ಡ್‌ಗಳು, ನಿರ್ಲಕ್ಷ್ಯಕ್ಕೆ ಹಿಡಿಶಾಪ:**

ಕಾಮಗಾರಿಗಳ ವಿಳಂಬದ ಜೊತೆಗೆ, ಹಲವು ವಾರ್ಡ್‌ಗಳಲ್ಲಿ ವಿದ್ಯುತ್ ಸಮಸ್ಯೆ ತಲೆದೋರಿದೆ. ಹೈಮಾಸ್ ಕಂಬಗಳ ಲೈಟ್‌ಗಳು ಹಾಳಾಗಿ ವಾರಗಳೇ ಕಳೆದಿದ್ದರೂ ರಿಪೇರಿ ಮಾಡದಿರುವುದು ಜನರ ಆಕ್ರೋಶಕ್ಕೆ ಮತ್ತೊಂದು ಕಾರಣವಾಗಿದೆ. ಪುರಸಭೆ ಸಿಬ್ಬಂದಿ ದುರಸ್ತಿಪಡಿಸಲು ಬಂದಾಗ ಸ್ವಿಚ್ ಬಾಕ್ಸ್‌ನಲ್ಲಿ ಕಂಕರ್ ಪುಡಿ ತುಂಬಿದ್ದನ್ನು ಕಂಡು, ಅದನ್ನು ತೆಗೆದ ನಂತರವೇ ರಿಪೇರಿ ಮಾಡುವುದಾಗಿ ಹೇಳಿ ಹೋಗಿದ್ದಾರೆ. ಆದರೆ, ಇದುವರೆಗೂ ಯಾವುದೇ ಕ್ರಮ ಕೈಗೊಂಡಿಲ್ಲ.

ಒಟ್ಟಾರೆ, ಮಾನ್ವಿ ಪುರಸಭೆಯಲ್ಲಿ ನಡೆಯುತ್ತಿರುವ ಅವ್ಯವಸ್ಥೆ ಮತ್ತು ಅಭಿವೃದ್ಧಿ ಕಾಮಗಾರಿಗಳ ವಿಳಂಬದಿಂದಾಗಿ ಸಾರ್ವಜನಿಕರು ತೀವ್ರ ಸಂಕಷ್ಟಕ್ಕೆ ಸಿಲುಕಿದ್ದು, ಅಧಿಕಾರಿಗಳು ಮತ್ತು ಜನಪ್ರತಿನಿಧಿಗಳು ತಕ್ಷಣವೇ ಕ್ರಮ ಕೈಗೊಳ್ಳುವಂತೆ ಒತ್ತಾಯಿಸಿದ್ದಾರೆ.

> "ಪಟ್ಟಣದಲ್ಲಿ ವಿದ್ಯುತ್, ನೀರು, ಚರಂಡಿ ಸ್ವಚ್ಛತೆ ಸೇರಿದಂತೆ ಮೂಲಭೂತ ಸೌಕರ್ಯಗಳ ಕೊರತೆ ತೀವ್ರವಾಗಿದೆ. ಜನರು ತಮ್ಮ ಸಮಸ್ಯೆಗಳನ್ನು ಹೇಳಿಕೊಂಡರೂ ಕೇಳುವವರು, ಪರಿಹರಿಸುವವರು ಇಲ್ಲ. ಈ ದುರಾಡಳಿತಕ್ಕೆ ಜನರು ಹಿಡಿಶಾಪ ಹಾಕುತ್ತಿದ್ದು, ಸಚಿವರು ಮತ್ತು ಶಾಸಕರು ಜನರೇ ಇಲ್ಲದ ಸಭೆ ಸಮಾರಂಭಗಳಲ್ಲಿ ಹಾರ–ಸನ್ಮಾನಗಳನ್ನು ಸ್ವೀಕರಿಸಿ ಹಾಯಾಗಿ ಇದ್ದಾರೆ."
>
> – ಸಾಜೀದ್ ಖಾದ್ರಿ, ಸಾಮಾಜಿಕ ಕಾರ್ಯಕರ್ತ, ಮಾನ್ವಿ

## ಮರು ಮೌಲ್ಯಮಾಪನದ ನಂತರ ರಾಜ್ಯಕ್ಕೆ 2 ನೇ ರ‍್ಯಾಂಕ್ ಪಡೆದ ತಾಲೂಕಿನ ವಿದ್ಯಾರ್ಥಿನಿ ದಿವ್ಯಾ



ಮಾನ್ವಿ: ತಾಲೂಕಿನ ನೀರಮಾನ್ವಿ ಗ್ರಾಮದಲ್ಲಿನ ಸರ್ಕಾರಿ ಅದರ್ಶ ವಿದ್ಯಾಲಯದ ವಿದ್ಯಾರ್ಥಿನಿ ದಿವ್ಯಾ ರಾಘವೇಂದ್ರ ಅವರನ್ನು ಶಾಲೆಯ ಮುಖ್ಯಗುರು ದೇವಯ್ಯ ಸನ್ಮಾನಿಸಿದರು.

ಯುವ ಮಾರ್ಗ ಸುದ್ದಿ

**ಮಾನ್ವಿ,ಮೇ.24**– ತಾಲೂಕಿನ ನೀರಮಾನ್ವಿ ಗ್ರಾಮದಲ್ಲಿನ ಸರ್ಕಾರಿ ಅದರ್ಶ ವಿದ್ಯಾಲಯದ ವಿದ್ಯಾರ್ಥಿನಿ ದಿವ್ಯಾ ರಾಘವೇಂದ್ರ 10 ನೇ ತರಗತಿ ವಾರ್ಷಿಕ ಪರೀಕ್ಷೆಯಲ್ಲಿ ರಾಜ್ಯಕ್ಕೆ 2 ನೇ ರ‍್ಯಾಂಕ್ ಪಡೆದು ಕೊಳ್ಳುವ ಮೂಲಕ ತಾಲೂಕಿನ ಕೀರ್ತಿಯನ್ನು ಹೆಚ್ಚಿಸಿದ್ದಾರೆ.

ವಿದ್ಯಾರ್ಥಿನಿ ದಿವ್ಯಾ 10 ನೇ ವಾರ್ಷಿಕ ಪರೀಕ್ಷೆಯಲ್ಲಿ ಮರು ಮೌಲ್ಯಮಾಪನದ ನಂತರ ಕನ್ನಡ ,ಹಿಂದಿ,ಗಣಿತ, ವಿಜ್ಞಾನ, ಸಮಾಜ ವಿಜ್ಞಾನ ವಿಷಯಗಳಲ್ಲಿ ನೂರಕ್ಕೆ ನೂರು ಅಂಕಗಳನ್ನು ಪಡೆದಿದ್ದು ಇಂಗ್ಲೀಷ್ ವಿಷಯದಲ್ಲಿ 124 ಅಂಕಗಳನ್ನು ಪಡೆದಿದ್ದು ಒಂದು ಅಂಕಗಳಿಂದ ಪ್ರಥಮ ರ‍್ಯಾಂಕ್‌ನ್ನು ತಪ್ಪಿಸಿಕೊಂಡಿದಾಳೆ.

ವಿದ್ಯಾರ್ಥಿನಿಯ ನಿವಾಸದಲ್ಲಿ ಸರ್ಕಾರಿ ಅದರ್ಶ ವಿದ್ಯಾಲಯ ನೀರಾಮಾನ್ವಿಯ ಪ್ರಾಚಾರ್ಯರಾದ ದೇವಯ್ಯ ಹಾಗೂ ಶಿಕ್ಷಕರಾದ ಗಂಗಮ್ಮ, ರಣಜೀತ್ ಕುಮಾರ, ವಿದ್ಯಾರ್ಥಿನಿ ದಿವ್ಯಾರಿಗೆ ಸನ್ಮಾನ ಮಾಡಿ ಅಭಿನಂದಿಸಿ ದರು. ವಿದ್ಯಾರ್ಥಿನಿಯ ತಂದೆ ರಾಘವೇಂದ್ರ, ತಾಯಿ ರೇಣುಕಮ್ಮ ಇದ್ದರು.

## ಮಕ್ಕಳಿಗೆ ಶಿಕ್ಷಣದ ಜೊತೆಗೆ ಸಂಸ್ಕಾರಕ್ಕೂ ಆದ್ಯತೆ ನೀಡಿ: ಶರಣು ಪಾಟೀಲ್ ಹೇರೂರು

ಯುವ ಮಾರ್ಗ ಸುದ್ದಿ

**ದೇವದುರ್ಗ, ಮೇ.24**– ಮಕ್ಕಳ ಉಜ್ವಲ ಭವಿಷ್ಯಕ್ಕಾಗಿ ಉನ್ನತ ಶಿಕ್ಷಣ ಸಂಸ್ಥೆಯನ್ನು ಆಯ್ಕೆ ಮಾಡಿಕೊಳ್ಳಿ. ಶಿಕ್ಷಣದ ಜೊತೆಗೆ ಮಕ್ಕಳಿಗೆ ಮಾನವೀಯ ಮೌಲ್ಯಗಳು ಹಾಗೂ ಸಂಸ್ಕಾರವನ್ನು ಕಲಿಸಬೇಕು ಎಂದು ಹೇರೂರು ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಶರಣು ಪಾಟೀಲ್ ತಿಳಿಸಿದರು.

ವೈಷ್ಣವಿ ನ್ಯಾಷನಲ್ ಆಂಗ್ಲ ಮಾಧ್ಯಮ ಶಾಲೆಯ ಬೇಸಿಗೆ ಶಿಬಿರದ ಸಮಾರೋಪ ಸಮಾರಂಭದಲ್ಲಿ ಮುಖ್ಯ ಅತಿಥಿಯಾಗಿ ಭಾಗವಹಿಸಿ ಅವರು ಮಾತನಾಡಿದರು. ಬೇಸಿಗೆ ದಿನಗಳಲ್ಲಿ ಮಕ್ಕಳು ಶಿಕ್ಷಣ




ದಿಂದ ವಂಚಿತರಾಗುತ್ತಿದ್ದು, ಮಕ್ಕಳ ಉಜ್ವಲ ಭವಿಷ್ಯಕ್ಕೆ ಬೇಸಿಗೆ ಶಿಬಿರಗಳು ಅವಶ್ಯಕವಾಗಿವೆ ಎಂದು ಹೇಳಿದರು.

ಮಾನಸಗಲ್ ಉಪನ್ಯಾಸಕ ಮತ್ತು ಪತ್ರಕರ್ತ ನಾಗರಾಜ್ ಪೂಜಾರಿ ಮಾತನಾಡಿ, ಮಕ್ಕಳಿಗೆ ನೈತಿಕತೆ, ಮಾನವೀಯ ಮೌಲ್ಯಗಳನ್ನು ಬೆಳೆಸುವಂತೆ ಕರೆ ನೀಡಿದರು. ಮಕ್ಕಳನ್ನು ಮೊಬೈಲ್ ಹಾವಳಿಯಿಂದ ದೂರವಿಟ್ಟು ಶಿಕ್ಷಣಕ್ಕೆ ಆದ್ಯತೆ ನೀಡಬೇಕೆಂದು ತಿಳಿಸಿದರು. ಚಿಂತಲಕುಂಟಾದ ವೆಂಕಟೇಶ ನಾಯಕ ಮಾತನಾಡಿ, ಶಿಕ್ಷಣದಿಂದ ಎಲ್ಲವೂ ಸಾಧ್ಯ ಎಂದು ಅಭಿಪ್ರಾಯಪಟ್ಟರು.

ಈ ಸಂದರ್ಭದಲ್ಲಿ ದುರುಗಪ್ಪ ಅಧ್ಯಕ್ಷತೆ ವಹಿಸಿದ್ದರು. ನಿಂಗಪ್ಪ ಸಲಿಕ್ಯಾಪೂರ, ನಿಂಗಪ್ಪ ಚಿಂತಲಕುಂಟಿ, ಆಂಜೀನಯ್ಯಗೌಡ ಸಲಿಕ್ಯಾಪೂರ, ಪ್ರಕಾಶ ಮಾತ್ಪಳ್ಳಿ, ಶಿವಪ್ಪ ಮಾತ್ಪಳ್ಳಿ, ಶಿಕ್ಷಕರು, ವಿದ್ಯಾರ್ಥಿಗಳು, ಪಾಲಕರು ಮತ್ತು ಪೋಷಕರು ಉಪಸ್ಥಿತರಿದ್ದರು

ಮೊದಲನೇಯ ಪುಟದಿಂದ

## ಜಿಲ್ಲಾ ನೌಕರರ ಸಂಘದ ಅಧ್ಯಕ್ಷರ ಮೇಲಿನ ಅವಮಾನ ಖಂಡಿಸಿ ಮನವಿ ಸಲ್ಲಿಕೆ

ಕ್ರಮ ಜರುಗಿಸುವಂತೆ ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಸರ್ಕಾರಿ ನೌಕರರ ಸಂಘದ ರಾಜ್ಯ ಪರಿಷತ್ ಸದಸ್ಯರಾದ ಅಕ್ತರ್ ಪಾಷಾ, ಖಜಾಂಚಿ ಬಾಗಯ್ಯನಾಯಕ, ಹನುಮಂತರಾವ್, ತಿಮ್ಮಣ್ಣ, ಶಿವಣ್ಣ, ತಿಮ್ಮೇಶ, ಮಲ್ಲಿಕಾರ್ಜುನ, ಸಂದೀಪ, ಸಂಗಮೇಶ, ಶಾಬಿರ್ ಪಾಷಾ ಸೇರಿದಂತೆ ತಾಲೂಕಿನ ವಿವಿಧ ಇಲಾಖೆಯ ನೌಕರರು ಉಪಸ್ಥಿತರಿದ್ದರು.

## 'ಜಲ ಸಿಂಚನ ಜಲ ಭಾಗಿದಾರ' ಯೋಜನೆ ಕಾಮಗಾರಿ ಪರಿಶೀಲಿಸಿದ ಕೇಂದ್ರ ತಂಡ

ಕಾರ್ಯನಿರ್ವಾಹಕ ಅಧಿಕಾರಿ ಖಾಲಿದ್ ಅಹ್ಮದ್ ಅವರು, ಕಾಮಗಾರಿಯಿಂದ ರೈತರ ಹೊಲಗಳ ಪಕ್ಕದಲ್ಲಿರುವ ನಾಲಾಗಳು ಸ್ವಚ್ಛವಾಗಿದ್ದು, 98 ಡಿಸ್ಟ್ರಿಬ್ಯೂಟರ್ ಕಾಲುವೆಗಳ ಮೂಲಕ ರೈತರ ಜಮೀನುಗಳಿಗೆ ನೀರು ಹರಿಯುತ್ತಿರುವ ಬಗ್ಗೆ ಕೇಂದ್ರ ತಂಡದ ಅಧಿಕಾರಿಗಳಿಗೆ ಮಾಹಿತಿ ನೀಡಿದರು.

ಗೋರ್ಕಲ್ ಗ್ರಾಮ ಪಂಚಾಯಿತಿ ಪಿಡಿಓ ಅಕ್ತರ ಪಾಶ, ತಾಂತ್ರಿಕ ಸಂಯೋಜಕ ವಿನೋದ್, ತಾಂತ್ರಿಕ ಸಹಾಯಕ ವೆಂಕಟೇಶ್, ಬಿ.ಎಫ್.ಟಿ. ತಿಮ್ಮಪ್ಪ, ಡಿ.ಇ.ಓ. ಗೋಪಾಲಕೃಷ್ಣ ಕೇಂದ್ರ ತಂಡಕ್ಕೆ ಅಗತ್ಯ ಮಾಹಿತಿಗಳನ್ನು ಒದಗಿಸಿದರು.

## ನ್ಯಾಷನಲ್ ಹೆರಾಲ್ಡ್‌ಗೆ ದೇಣಿಗೆ, ಡಿಕೆಶಿ ಮೇಲೆ ಆರೋಪ

9.02 ಕೋಟಿಯ ಈಕ್ವಿಟಿ ಷೇರುಗಳನ್ನಾಗಿ ಪರಿವರ್ತಿಸಿ ಯಂಗ್ ಇಂಡಿಯನ್‌ಗೆ ವರ್ಗಾಯಿಸಲಾಗಿದೆ ಎಂದು ಇ.ಡಿ. ದೋಷಾರೋಪ ಪಟ್ಟಿಯಲ್ಲಿ ಉಲ್ಲೇಖಿಸಿದೆ.

ದೇಣಿಗೆ, ಡಿಕೆಶಿ ಸಮರ್ಥನೆ

ನ್ಯಾಷನಲ್ ಹೆರಾಲ್ಡ್ ಪತ್ರಿಕೆಗೆ ಹಣಕಾಸು ನೆರವು ನೀಡಿದರಲ್ಲಿ ಯಾವುದೇ ತಪ್ಪಿಲ್ಲ ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಸಮರ್ಥಿಸಿಕೊಂಡರು.

ಶುಕ್ರವಾರ ಮಧ್ಯಾಹ್ನ ವಿಜಯಪುರ ಜಿಲ್ಲೆಯ ಕೊಲ್ಹಾರ ಪಟ್ಟಣದಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳ ಚಾಲನೆಗೆ ಮುನ್ನ ಸುದ್ದಿಗಾರರ ಜೊತೆಗೆ ಪ್ರತಿಕ್ರಿಯಿಸಿದರು.

ನ್ಯಾಷನಲ್ ಹೆರಾಲ್ಡ್ ಪತ್ರಿಕೆ ಹಗರಣದಲ್ಲಿ ಡಿಸಿಎಂ ಡಿ.ಕೆ. ಶಿವಕುಮಾರ ಸಹೋದರ ಡಿ.ಕೆ. ಸುರೇಶ ಹಾಗೂ ರೇವಂತ ರೆಡ್ಡಿ ಭಾಗಿಯಾಗಿರುವ ಆರೋಪದ ವಿಚಾರಕ್ಕೆ ಸಂಬಂಧಿಸಿದಂತೆ ಪತ್ರಕರ್ತರು ಕೇಳಿದ ಪ್ರಶ್ನೆಗೆ ಮೇಲಿನಂತೆ ಉತ್ತರಿಸಿದರು.

ನ್ಯಾಷನಲ್ ಹೆರಾಲ್ಡ್ ಪತ್ರಿಕೆ ನಮ್ಮ ಪಕ್ಷದ್ದು. ಪಕ್ಷದ ಪತ್ರಿಕೆಗೆ ಫಂಡ್ ಕೊಟ್ಟಿದ್ದೇವೆ. ಕೊಟ್ಟರೆ ಏನು ತಪ್ಪು? ಎಂದು ಸಮರ್ಥಿಸಿದರು.

ನ್ಯಾಷನಲ್ ಹೆರಾಲ್ಡ್ ಪತ್ರಿಕೆಗೆ ಹಣಕಾಸು ನೆರವು ನೀಡಿದ್ದನ್ನು ಒಪ್ಪಿದ ಡಿಕೆಶಿ, ಅದರಲ್ಲಿ ಏನು ತಪ್ಪಿದೆ ಎಂದು ಮರು ಪ್ರಶ್ನಿಸಿದರು.

## ಜಾಮೀನು ದೊರೆತ ಬೆನ್ನಿಗೆ ಅತ್ಯಾಚಾರ ಆರೋಪಿಗಳ ವಿಜಯೋತ್ಸವ

ತೌಸಿಫ್‌ಚೋಟಿ ಮತ್ತು ರಿಯಾಜ್‌ಸವಿಕೇರಿ ಇವರುಗಳು ಕಾರುಗಳಲ್ಲಿ, ಬೈಕ್‌ಗಳಲ್ಲಿ ಕುಳಿತು ವಿಜಯೋತ್ಸವದ ರೀತಿಯಲ್ಲಿ ಮೆರವಣಿಗೆ ನಡೆಸಿರುವ ವೀಡಿಯೊಗಳು ವೈರಲ್ ಆಗುತ್ತಿದ್ದಂತೆಯೇ ಸಾರ್ವಜನಿಕವಾಗಿ ದೊಡ್ಡ ಮಟ್ಟದ ಆಕ್ರೋಶ ವ್ಯಕ್ತವಾಗಿದ್ದು, ಅತ್ಯಾಚಾರ ಪ್ರಕರಣದ ಆರೋಪಿಗಳಾಗಿದ್ದರೂ ವಿಜಯೋತ್ಸವದ ಮೆರವಣಿಗೆ ನಡೆಸಿ ಅಟ್ಟಹಾಸ ಮೆರೆದಿರುವ ಇವರುಗಳ ವಿರುದ್ಧ ಕ್ರಮ ಕೈಗೊಳ್ಳಬೇಕೆಂಬ ಒತ್ತಾಯವು ಸಾರ್ವಜನಿಕ ವಲಯದಲ್ಲಿ ವ್ಯಕ್ತವಾಗಿದೆ.

ಕಳೆದ 3 ದಿನಗಳ ಹಿಂದೆ ಹಾವೇರಿ ಸಬ್ ಜೈಲಿನಿಂದ ಅಕ್ಕಿ ಆಲೂರಿನವರೆಗೆ ಆರೋಪಿಗಳು ರೋಡ್ ಶೋ ನಡೆಸಿದ್ದಾರೆ. 5 ಕಾರುಗಳಲ್ಲಿ 20ಕ್ಕೂ ಹೆಚ್ಚು ಹಿಂಬಾಲಕರ ಜೊತೆ ಅಕ್ಕಿ ಆಲೂರಿನ ಪ್ರಮುಖ ಬೀದಿಗಳಲ್ಲಿ ಮೆರವಣಿಗೆ ನಡೆಸಿರೋ ವೀಡಿಯೋಗಳು ವೈರಲ್ ಆಗಿದೆ.

3 ದಿನಗಳ ಹಿಂದೆ ಹಾನಗಲ್ ಗ್ಯಾಂಗ್ ರೇಪ್ ಪ್ರಕರಣದ ಪ್ರಮುಖ 7 ಆರೋಪಿಗಳಿಗೆ ಜಾಮೀನು ಸಿಕ್ಕಿದೆ. ಹಾವೇರಿ ಹೆಚ್ಚುವರಿ ಜಿಲ್ಲಾ ಮತ್ತು ಸೆಷನ್ ನ್ಯಾಯಾಲಯವು ಜಾಮೀನು ಮಂಜೂರು ಮಾಡಿದ್ದು, ಸಂತ್ರಸ್ತೆ ಆರೋಪಿಗಳನ್ನು ಗುರುತಿಸಲು ವಿಫಲವಾದ ಹಿನ್ನೆಲೆಯಲ್ಲಿ ಪ್ರಕರಣದ ಪ್ರಮುಖ 7 ಆರೋಪಿಗಳಿಗೆ ನ್ಯಾಯಾಲಯ ಜಾಮೀನು ಮಂಜೂರು ಮಾಡಿತ್ತು.

ಎ1 ಆರೋಪಿ ಅಫ್ತಾದ್ ಚಂದನಕಟ್ಟಿ, ಎ2 ಮದರ್ ಸಾಬ್ ಮಂಡಕ್ಕಿ, ಎ3 ಸಮಿವುಲ್ಲಾ ಲಾಲನವರ, ಎ4 ಮಹಮದ್ ಸಾದಿಕ್ ಅಗಸಿಮನಿ, ಎ8 ಶೊಯಿಬ್ ಮುಲ್ಲಾ, ಎ11 ತೌಸಿಪ್ ಚೋಟಿ, ಎ13 ರಿಯಾಜ್ ಸಾವಿಕೇರಿಗೆ ಜಾಮೀನು ಮಂಜೂರು ಮಾಡಿದೆ.

2024, ಜನವರಿ 8ರಂದು ಹಾನಗಲ್ ಹೊರವಲಯದಲ್ಲಿ ಗ್ಯಾಂಗ್ ರೇಪ್ ಪ್ರಕರಣ ದಾಖಲಾಗಿತ್ತು. ಪ್ರಕರಣದಲ್ಲಿ ಜೈಲುಪಾಲಾಗಿದ್ದ 19 ಆರೋಪಿಗಳ ಪೈಕಿ 12 ಆರೋಪಿಗಳು 10 ತಿಂಗಳ ಹಿಂದೆಯೇ ಜಾಮೀನು ಪಡೆದಿದ್ದರು.

ಆದರೆ ಪ್ರಮುಖ ಆರೋಪಿಗಳ ಜಾಮೀನು ಅರ್ಜಿಗಳನ್ನು ಹಲವು ಬಾರಿ ನ್ಯಾಯಾಲಯ ತಿರಸ್ಕರಿಸಿತ್ತು. ಸಂತ್ರಸ್ತೆ ಮ್ಯಾಜಿಸ್ಟ್ರೇಟ್ ಮುಂದೆ ನೀಡಿದ್ದ ಹೇಳಿಕೆಗಳನ್ನು ಉಳಿಸಿಕೊಳ್ಳಲು ವಿಫಲವಾದ ಹಿನ್ನೆಲೆಯಲ್ಲಿ ಆರೋಪಿಗಳಿಗೆ ಈಗ ಜಾಮೀನು ಸಿಕ್ಕಿದೆ.

ಆರೋಪಿಗಳು ಜಾಮೀನು ಸಿಕ್ಕ ಬೆನ್ನಲ್ಲೇ ಕಾರಿನಲ್ಲಿ ರೋಡ್ ಶೋ ನಡೆಸಿರುವುದು ಜಿಲ್ಲೆಯ ಜನರ ಆಕ್ರೋಶ ಕಾರಣವಾಗಿದೆ. ಪೊಲೀಸ್ ಇಲಾಖೆ ಮತ್ತೆ ಪ್ರಕರಣ ದಾಖಲಿಸಿಕೊಂಡು ಜಾಮೀನು ರದ್ದು ಮಾಡುವಂತೆ ಜಿಲ್ಲೆಯ ಜನರು ಆಗ್ರಹಿಸಿದ್ದಾರೆ.

ಹಾವೇರಿಯಲ್ಲಿ 2024ರ ಜನವರಿ 8 ರಂದು ಖಾಸಗಿ ಹೋಟೆಲ್‌ನಲ್ಲಿ ದಂಪತಿಗಳು ತಂಗಿದ್ದರು. ಆಗ 26 ವರ್ಷದ ಮಹಿಳೆಯನ್ನು ಹೋಟೆಲ್‌ನಿಂದ ಎಳೆದೊಯ್ದು ಹತ್ತಿರದ ಅರಣ್ಯ ಪ್ರದೇಶಕ್ಕೆ ಕೊಂಡೊಯ್ದು ಇವರೆಲ್ಲ ಸಾಮೂಹಿಕ ಅತ್ಯಾಚಾರವನ್ನು ಎಸಗಿದ್ದರು ಎಂದು ದೂರು ದಾಖಲಾಗಿತ್ತು.

ಸಂತಸ್ತೆ ನೀಡಿದ ದೂರಿನಂತೆ ಪೊಲೀಸರು ಈ ಪ್ರಕರಣದಲ್ಲಿ 19 ಜನರನ್ನು ಬಂಧಿಸಿದ್ದರು. ಅವರಲ್ಲಿ ಈಗ ಜಾಮೀನಿನ ಮೇಲೆ ಬಿಡುಗಡೆಯಾಗಿರುವ 7 ಪ್ರಮುಖ ಆರೋಪಿಗಳು ಸೇರಿದ್ದಾರೆ.

10 ತಿಂಗಳ ಹಿಂದೆಯೇ 12 ಆರೋಪಿಗಳಿಗೆ ಜಾಮೀನು ಸಿಕ್ಕಿತ್ತು. ಈಗ ಉಳಿದ 7 ಆರೋಪಿಗಳಿಗೆ ನ್ಯಾಯಾಲಯ ಜಾಮೀನು ಮಂಜೂರು ಮಾಡಿತ್ತು. ಜಾಮೀನಿನ ಮೇಲೆ ಹೊರ ಬಂದ ನಂತರ ಆರೋಪಿಗಳು ವಿಜಯೋತ್ಸವದ ರೀತಿಯಲ್ಲಿ ಕಾರುಗಳಲ್ಲಿ ಮೆರವಣಿಗೆ ಹೋಗಿದ್ದರು.

## ಜಿಲ್ಲಾ ಜೀನ್ಸ್ ಗಾರ್ಮೆಂಟ್ ಕಾರ್ಮಿಕರು ಸಂಘಟಿತರಾಗಿ ಸರ್ಕಾರದ ಸೌಲಭ್ಯ ಪಡೆಯಲು ಕರೆ

**ಬಳ್ಳಾರಿ, ಮೇ.24–** ಜಿಲ್ಲಾ ಜೀನ್ಸ್ ಗಾರ್ಮೆಂಟ್ ಕಾರ್ಮಿಕರು ಸಂಘಟಿತರಾಗಿ ಸರ್ಕಾರದ ಸೌಲಭ್ಯ ಪಡೆಯುವಂತಾಗಲಿ ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಬಳ್ಳಾರಿಯ ಜಿಲ್ಲಾ ಸದಸ್ಯ ಕಾರ್ಯದರ್ಶಿಯಾದ ರಾಜೇಶ್ ಹೊಸಮನೆ ಕರೆ ನೀಡಿದರು.

ನಗರದ ಬಿಡಿಎಸ್ ತರಬೇತಿ ಕೇಂದ್ರದಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜೀನ್ಸ್ ಗಾರ್ಮೆಂಟ್ ಕಮ್ಯೂನಿಟಿ ಡೆವೆಲಪ್ಮೆಂಟ್ ಅಸೋಸಿಯೇಷನ್, ರೀಚ್ ಸಂಸ್ಥೆ ಬಳ್ಳಾರಿ, ಕಾನೂನು ಇಲಾಖೆ, ಕೈಮಗ್ಗ ಮತ್ತು ಜವಳಿ ಇಲಾಖೆ, ಜಿಲ್ಲಾ ಮಕ್ಕಳ ಮತ್ತು ರಕ್ಷಣಾ ಘಟಕ, ಬಳ್ಳಾರಿ ಇವರ ಸಂಯುಕ್ತಾಶ್ರಯದಲ್ಲಿ ಆಯೋಜಿಸಿದ್ದ ಕಾರ್ಮಿಕ ದಿನಾಚರಣೆಯನ್ನು ಉದ್ಘಾಟಿಸಿ ಮಾತನಾಡುತ್ತಾ, 8 ಗಂಟೆಗಳ ದುಡಿಮೆಗಾಗಿ ನಡೆದ ಕಾರ್ಮಿಕರ ಹೋರಾಟದ ಭಾಗವಾಗಿ ಇಂದು ಜಗತ್ತಿನಾದ್ಯಂತ 194 ರಾಷ್ಟ್ರಗಳಲ್ಲಿ ಕಾರ್ಮಿಕರ ದಿನಾರಚಣೆಯನ್ನು ಆಚರಿಸಲಾಗುತ್ತಿದೆ. ಕಾರ್ಮಿಕರಿಗೆ ಗೌರವಯುತ ಬದುಕು ನೀಡಲು, ಕಾರ್ಮಿಕರ ಕಲ್ಯಾಣಕ್ಕಾಗಿ ಹಲವಾರು ಹಕ್ಕುಗಳನ್ನು ಜಾರಿಗೆ ತರಲಾಯಿತು. ನಮ್ಮ ದೇಶದಲ್ಲಿ ಸಂವಿಧಾನದಡಿಯಲ್ಲಿ ಕಾರ್ಮಿಕರಿಗೆ ಹಲವಾರು ಹಕ್ಕುಗಳನ್ನು ನೀಡಲಾಗಿದೆ. ಸಮಾನ ಕೆಲಸಕ್ಕೆ ಸಮಾನ ವೇತನ, ಕನಿಷ್ಠ ವೇತನ ಕಾಯಿದೆ, ಮಹಿಳೆಯಿರಿಗೆ ವಿಶೇಷ ಸೌಲಭ್ಯಗಳನ್ನು ನೀಡಲಾಗಿದೆ. ಇಂದು ಮಹಿಳೆಯರು ಎಲ್ಲಾ ಕ್ಷೇತ್ರಗಳಲ್ಲಿ ಸಮಾನವಾಗಿ ದುಡಿಯುತ್ತಿದ್ದಾರೆ. ಮಹಿಳೆ ಕಾರ್ಮಿಕರು ಮಾನಸಿಕವಾಗಿ ಹೆಚ್ಚು ಸದೃಢರಾಗಿದ್ದು ಬಲಿಷ್ಠರಾರುವ ಮೂಲಕ ಅಸಂಘಟಿತ ವಲಯದಲ್ಲಿನ ಮಹಿಳಾ ಕಾರ್ಮಿಕರು ತಮ್ಮ ಹಕ್ಕುಗಳನ್ನು ಪಡೆಯಲು ಹಾಗೂ ಸರ್ಕಾರದ ಸೌಲಭ್ಯಗಳನ್ನು ಪಡೆಯಲು ಮುಂದಾಗಬೇಕೆಂದರು.

## ಫಲಿತಾಂಶ ಹೆಚ್ಚಳಕ್ಕೆ ಶಿಕ್ಷಕರು ಶ್ರಮವಹಿಸಿ : ಶಾಸಕ ಚವ್ಹಾಣ



**ಔರಾದ,ಮೇ.24–** ಸಮಾಜದಲ್ಲಿ ಶಿಕ್ಷಕರ ಪಾತ್ರ ಬಹಳ ಮಹತ್ವದ್ದು. ಪ್ರತಿಯೊಬ್ಬ ಶಿಕ್ಷಕರೂ ಪ್ರಾಮಾಣಿಕತೆ ಮತ್ತು ಕರ್ತವ್ಯ ನಿಷ್ಠೆಯಿಂದ ಸೇವೆ ಸಲ್ಲಿಸುವ ಮೂಲಕ ಫಲಿತಾಂಶ ಹೆಚ್ಚಳಕ್ಕೆ ಕ್ರಮ ಕೈಗೊಳ್ಳಬೇಕು ಎಂದು ಶಿಕ್ಷಕರಿಗೆ ಶಾಸಕ ಪ್ರಭು ಚವ್ಹಾಣ ಸಲಹೆ ನೀಡಿದರು.

ಪಟ್ಟಣದ ಆದರ್ಶ ಮಹಾವಿದ್ಯಾಲಯದಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿಗಳು ಹಾಗೂ ಕ್ಷೇತ್ರ ಸಮನ್ವಯಾಧಿಕಾರಿಗಳ 2025–26ನೇ ಸಾಲಿನ ಶಾಲಾ ಪ್ರಾರಂಭೋತ್ಸವ ಕುರಿತು ನಡೆದ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದ ಅವರು ಶಾಲೆಯಲ್ಲಿ ಎಲ್ಲ ಶಿಕ್ಷಕರೂ ಶ್ರಮವಹಿಸಿ, ಅತ್ಯಂತ ಕಾಳಜಿಯಿಂದ ವಿದ್ಯಾರ್ಥಿಗಳಿಗೆ ಬೋಧನೆ ಮಾಡುವುದು, ಕಠಿಣ ವಿಷಯಗಳನ್ನು ಮನದಟ್ಟು ಮಾಡುವುದುರ ಮೂಲಕ ಕ್ಷೇತ್ರದ ಶೈಕ್ಷಣಿಕ ಪ್ರಗತಿಗೆ ಶ್ರಮಿಸಬೇಕು ಎಂದರು.

ತಾಲೂಕಿನ ಎಲ್ಲಾ ಶಾಲೆಯಲ್ಲಿ ಕುಡಿಯುವ ನೀರು, ಶೌಚಾಲಯ ಸೇರಿದಂತೆ ಮೂಲಸೌಲಭ್ಯಗಳ ಅಭಿವೃದ್ಧಿಗೆ 2008ರಿಂದ ಆದ್ಯತೆ ನೀಡುತ್ತಾ ಬಂದಿರುವೆ, ಎಲ್ಲ ರೀತಿಯ ಸೌಲಭ್ಯಗಳು ಇದ್ದರು ಸಹ ಫಲಿತಾಂಶ ಕುಂಟಿತಗೊಳ್ಳುತ್ತಿದೆ, ಮುಖ್ಯ ಶಿಕ್ಷಕರು ಶಿಕ್ಷಕರ ಸಭೆ ನೀಡಿ ಸೂಚನೆ ನೀಡುವ ಮೂಲಕ ಶೈಕ್ಷಣಿಕ ಅಭಿವೃದ್ಧಿಗೆ ಕೈ ಜೋಡಿಸಬೇಕು. ಗಡಿಭಾಗದ ಶಾಲೆಗಳಲ್ಲಿ ಕೆಲ ಶಿಕ್ಷಕರು ಮದ್ಯಪಾನ ಮಾಡಿ ಶಾಲೆಗೆ ಹಾಜರಗುತ್ತಿರುವ ಬಗ್ಗೆ ದೂರುಗಳು ಬಂದಿವೆ ಹೀಗೆ ಕಂಡು ಬಂದಲ್ಲಿ ನಿರ್ದಾಕ್ಷಿಣ್ಯವಾಗಿ ಕ್ರಮ ಕೈಗೊಳ್ಳಲಾಗುತ್ತದೆ ಎಂದು ಸೂಚಿಸಿದರು.

ನಮ್ಮ ಭಾಗದಲ್ಲಿ ಬಡ ಹಾಗೂ ರೈತಾಪಿ ವರ್ಗದ ಮಕ್ಕಳು ಜಾಸ್ತಿ ಇದ್ದು ಆ ಮಕ್ಕಳಿಗೆ ಉತ್ತಮ ಶಿಕ್ಷಣ ನೀಡುವ ಜವಾಬ್ದಾರಿ ನಮ್ಮ ಶಿಕ್ಷಕರ ಮೇಲಿದೆ, ಈಗಾಗಲೇ ಎಲ್ಲ ಶಾಲೆಯ ಮಾಹಿತಿಯನ್ನು ಪಡೆದು ಯಾವ ಶಾಲೆಯಲ್ಲಿ ಶಿಕ್ಷಕರ ಕೊರತೆ ಇದೆ ಶಿಕ್ಷಕರನ್ನು ನೇಮಕ ಮಾಡಬೇಕು ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ತಿಳಿಸಿದರು.

ಈ ಸಂದರ್ಭದಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿ ರಂಗೇಶ್, ಪ್ರಕಾಶ ರಾಠೋಡ ಸೇರಿದಂತೆ ತಾಲೂಕಿನ ಎಲ್ಲಾ ಸರ್ಕಾರಿ ಶಾಲೆಗಳ ಮುಖ್ಯ ಶಿಕ್ಷಕರು ಉಪಸ್ಥಿತರಿದ್ದರು.

**ಶಿಕ್ಷಕರು ಮನೆ ಮನೆಗೆ ತೆರಳಿ ಪ್ರವೇಶಾತಿ ಹೆಚ್ಚಿಸಿ**

ಶಿಕ್ಷಕರು ಇಚ್ಛಾಶಕ್ತಿಯಿಂದ ಕೆಲಸ ಮಾಡಬೇಕು ಇಲ್ಲದಿದ್ದರೆ ವರ್ಗಾವಣೆ ಹೊಂದಿ, ಕಳೆದ ವರ್ಷಕ್ಕಿಂತ ಈ ವರ್ಷ ಫಲಿತಾಂಶ ಕಡಿಮೆಯಾಗಿದೆ ಆದ್ದರಿಂದ ಎಲ್ಲ ಗ್ರಾಮಗಳ ಮನೆ ಮನೆಗೆ ತೆರಳಿ ಪ್ರವೇಶಾತಿ ಹೆಚ್ಚಳ ಮಾಡಬೇಕು ಈ ವರ್ಷ ಫಲಿತಾಂಶ ಹೆಚ್ಚಳಕ್ಕೆ ಕ್ರಮಗಳನ್ನು ಕೈಗೊಳ್ಳಬೇಕು ಎಂದು ತಿಳಿಸಿದರು.

**ತಿರಂಗಾ ಯಾತ್ರೆಯಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಿ**

ಪಹಲ್ಗಾಮ್‌ನಲ್ಲಿ ನಡೆದ ಉಗ್ರರ ದಾಳಿಯ ಪ್ರತಿಕಾರವಾಗಿ ಭಾರತೀಯ ಸೇನೆ ನಡೆಸಿದ ಆಪರೇಷನ್ ಸಿಂಧೂರ್ ಕಾರ್ಯಾಚರಣೆ ಯಶಸ್ವಿಯಾದ ಹಿನ್ನೆಲೆಯಲ್ಲಿ ಔರಾದ ಪಟ್ಟಣದಲ್ಲಿ ಮೇ.26ರ ಬೆಳಗ್ಗೆ 9 ಗಂಟೆಗೆ ತಿರಂಗಾ ಯಾತ್ರೆ ಹಮ್ಮಿಕೊಳ್ಳಲಾಗಿದೆ ಪಟ್ಟಣದ ಪ್ರವಾಸಿ ಮಂದಿರದ ಹತ್ತಿರದಿಂದ ಯಾತ್ರೆ ಹೊರಟು ಪ್ರಮುಖ ರಸ್ತೆಗಳ ಮುಖಾಂತರ ಎಪಿಎಂಸಿ ವೃತ್ತದ ವರೆಗೆ ಬಂದು ಕೊನೆಗೊಳ್ಳಲಿದೆ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಬೇಕು ಎಂದು ಶಾಸಕ ಪ್ರಭು ಚವ್ಹಾಣ ಅವರು ತಿಳಿಸಿದ್ದಾರೆ.

## ಲಕ್ಷಾಂತರ ಭಕ್ತರಿಂದ ಊರಮ್ಮನ ರಥೋತ್ಸವ



**ಕೂಡ್ಲಿಗಿ,ಮೇ.24–** ಪಟ್ಟಣದ ಗ್ರಾಮದೇವತೆ ಊರಮ್ಮದೇವಿಯ ಉತ್ಸವ ಮೂರ್ತಿಯನ್ನು ತೇರಿನ ಮುಂದೆ ಕಟ್ಟಿ ಊರು ಕಾಯೋ ಊರಮ್ಮದೇವಿ ರಥೋತ್ಸವವು ಲಕ್ಷಾಂತರ ಭಕ್ತರ ಸಮ್ಮುಖದಲ್ಲಿ ಗುರುವಾರ ಸಂಜೆ ಅದ್ದೂರಿಯಾಗಿ ನೆರವೇರಿತು.

ಪಟ್ಟಣದಲ್ಲಿ ನೂತನವಾಗಿ ನಿರ್ಮಿಸಿರುವ ಊರಮ್ಮದೇವಿ ದೇವಸ್ಥಾನದಿಂದ ದೇವಿಯ ಉತ್ಸವ ಮೂರ್ತಿಯನ್ನು ದೈವಸ್ಥರ ಸಮ್ಮುಖದಲ್ಲಿ ಸಕಲ ವಾದ್ಯಗೊಳೊಂದಿಗೆ ಹಳೆಯ ಸಂತೆ ಮಾರುಕಟ್ಟೆ ಲಕ್ಷ್ಮಿ ಬಜಾರ್ ನ ಬಳಿಯಿದ್ದ ರಥದ ಬಳಿಗೆ ತಂದು ಮೂರು ಸುತ್ತು ಪ್ರದಕ್ಷಿಣೆ ಹಾಕಲಾಯಿತು. ನಂತರ ದೇವಿಯ ಉತ್ಸವಮೂರ್ತಿಯನ್ನು ಜಯಘೋಷಗಳೊಂದಿಗೆ ರಥದ ಮೇಲೆ ಮುಂದುಗಡೆ ಅದನ್ನು ಪ್ರತಿಷ್ಠಾಪಿಸಿದ ನಂತರ ಪೂಜಾ ವಿಧಿ, ವಿಧಾನಗಳನ್ನು ನೆರವೇರಿಸಲಾಯಿತು. ನಂತರ ಭಕ್ತರು ರಥವನ್ನು ಎಳೆಯುತ್ತಿದ್ದಂತೆ ಊರಮ್ಮದೇವಿಗೆ ಜೈ, ಆದಿಶಕ್ತಿಗೆ ಜಯವಾಗಲಿ ಎಂದು ಭಕ್ತರು ಜಯಘೋಗಳನ್ನು ಕೂಗಿದರಲ್ಲದೆ, ಉತ್ತತ್ತಿ, ಬಾಳೆಹಣ್ಣನ್ನು ರಥಕ್ಕೆ ತೂರಿ ಭಕ್ತಿ ಸಮರ್ಪಿಸಿದರು. ಹಳೆಯ ಸಂತೆ ಮಾರುಕಟ್ಟೆಯಿಂದ ಮುಖ್ಯರಸ್ತೆಯ ಮೂಲಕ ರಾಜವೀರ ಮದಕರಿನಾಯಕ, ಡಾ.ಬಿ.ಆರ್.ಅಂಬೇಡ್ಕರ್ ವೃತ್ತಗಳಿಂದ ಹಾದು ಪ್ರವಾಸಿ ಮಂದಿರ ಎದುರಿನ ಊರಮ್ಮದೇವಿ ಪಾದಗಟ್ಟೆಯವರೆಗೆ ರಥವನ್ನು ಎಳೆದು ಅಲ್ಲಿಯೇ ನಿಲ್ಲಿಸಲಾಯಿತು. ವಿಜಯನಗರ, ಬಳ್ಳಾರಿ, ಚಿತ್ರದುರ್ಗ, ದಾವಣಗೆರೆ ಜಿಲ್ಲೆಗಳು ಹಾಗೂ ರಾಜ್ಯ ಸೇರಿ ನೆರೆಯ ಆಂಧ್ರಪ್ರದೇಶ, ತೆಲಂಗಾಣ, ಮಹಾರಾಷ್ಟ್ರದಿಂದಲೂ ಆಗಮಿಸಿದ್ದ ಭಕ್ತರು ರಥೋತ್ಸವದಲ್ಲಿ ಭಾಗವಹಿಸಿದ್ದರು.

ಕೂಡ್ಲಿಗಿ ಡಿವೈಎಸ್‌ಪಿ ಮಲ್ಲೇಶ್ ದೊಡ್ಡಮನಿ, ಸಿಪಿಐ ಪ್ರಲ್ಹಾದ್ ಆರ್.ಚನ್ನಗಿರಿ, ಕೊಟ್ಟೂರು, ಹಗರಿಬೊಮ್ಮನಹಳ್ಳಿ ಸಿಪಿಐಗಳು, ಪಿಎಸ್‌ಐ ಸಿ.ಪ್ರಕಾಶ್ ನೇತೃತ್ವದಲ್ಲಿ ಜಿಲ್ಲಾದ್ಯಂತ ಆಗಮಿಸಿದ್ದ 200ಕ್ಕೂ ಹೆಚ್ಚು ಪೊಲೀಸರು ಬಿಗಿ ಬಂದೋಬಸ್ತ್ ಒದಗಿಸಿದ್ದರು.

ರಥವು ಊರಮ್ಮದೇವಿ ಪಾದಗಟ್ಟೆಗೆ ಬಂದು ನಿಲ್ಲುತ್ತಿದ್ದಂತೆ ಬಾನಂಗಳದಲ್ಲಿ ಚಿತ್ತಾರ ಮೂಡುವಂತೆ ಪಟಾಕಿ ಸಿಡಿಸಿದ್ದು ನೋಡುಗರ ಕಣ್ಣಿಗೆ ಹಬ್ಬದಂತಿತ್ತು. ಜಾತ್ರೋತ್ಸವ ಹಾಗೂ ರಥೋತ್ಸವದ ಯಶಸ್ವಿಗೆ ಪಟ್ಟಣದ ದೈವಸ್ಥರು, ಆಯಗಾರರು ಸೇರಿ ಮುಖಂಡರು, ಯುವಕರು ಹೆಚ್ಚಿನ ಶ್ರಮವಹಿಸಿದ್ದರು.

ಕೂಡ್ಲಿಗಿ ಗ್ರಾಮದೇವತೆ ಊರಮ್ಮದೇವಿಯ ಜಾತ್ರೆ ಮೂರು ದಿನಗಳ ಕಾಲ ವಿಜೃಂಭಣೆಯಿಂದ ನಡೆಯಿತಾದರೂ, ಊರಮ್ಮದೇವಿಗೆ ಪ್ರತ್ಯೇಕ ತೇರು ಇಲ್ಲವಾದರೂ ರಥೋತ್ಸವ ನಡೆಯಿತು. ಪಟ್ಟಣದಲ್ಲಿ ಆರಾಧ್ಯದೈವ ಕೊತ್ತಲ ಆಂಜನೇಯ ಸ್ವಾಮಿ ಮತ್ತು ಗ್ರಾಮದೇವತೆ ಊರಮ್ಮದೇವಿಯು ಅಣ್ಣ, ತಂಗಿಯೆಂಬ ಐತಿಹ್ಯವಿದೆ. ಕೊತ್ತಲ ಆಂಜನೇಯ ಸ್ವಾಮಿಗೆ ಪ್ರತ್ಯೇಕ ರಥವಿದೆಯಾದ್ದರಿಂದ, ಆ ರಥದಲ್ಲೇ ಊರಮ್ಮದೇವಿಯ ರಥೋತ್ಸವ ನಡೆಯುವುದು ಬಹು ಹಿಂದಿನಿಂದಲೂ ನಡೆದುಕೊಂಡು ಬಂದಿರುವ ಪದ್ಧತಿಯಾಗಿದೆ. ಹೀಗಾಗಿ, ಅಣ್ಣ ಕೊತ್ಲಯ್ಯನ ತೇರಿನಲ್ಲಿ ತಂಗಿ ಊರಮ್ಮನ ಮೆರವಣಿಗೆಯ ಸಂಭ್ರಮ ನೋಡುವುದಕ್ಕಾಗಿ ಜನಸಾಗರವೇ ನೆರೆದಿದ್ದು ವಿಶೇಷವಾಗಿತ್ತು. ರಥೋತ್ಸವದಲ್ಲಿ ಕರಡಿ ಸಮಾಳ, ಮಹಿಳಾ ಡೊಳ್ಳು ಕುಣಿತ, ಹಲಗೆ ವಾದನ, ಪಟ ಕುಣಿತ, ಭಜನೆ, ಕೋಲಾಟ ಸೇರಿ ನಾನಾ ಜಾನಪದ ಕಲಾ ತಂಡಗಳು ಮೆರಗು ಹೆಚ್ಚಿಸಿದವು.

ಕೂಡ್ಲಿಗಿಯಲ್ಲಿ ನಡೆದ ಊರಮ್ಮದೇವಿ ರಥೋತ್ಸವದಲ್ಲಿ ಗಣ್ಯರ ದಂಡೇ ಆಗಮಿಸಿತ್ತು. ಸ್ಥಳೀಯ ಶಾಸಕ ಡಾ.ಎನ್.ಟಿ.ಶ್ರೀನವಾಸ್ ಮತ್ತು ಸಹೋದರ ಎನ್ ಟಿ ತಮ್ಮಣ್ಣ, ಮಾಜಿ ಸಚಿವ ಬಿ.ಶ್ರೀರಾಮುಲು, ಭಾಗವಹಿಸಿದ್ದರು.

# ಕುಮಾರಸ್ವಾಮಿಗೆ ಮಾನಸಿಕ ಅಸ್ವಸ್ಥತೆ ಕಾಡುತ್ತಿದೆ : ಡಿಕೆಶಿ ತಿರುಗೇಟು

**ವಿಜಯಪುರ,ಮೇ.24–** ಕೇಂದ್ರ ಸಚಿವ ಕುಮಾರಸ್ವಾಮಿಯವರಿಗೆ ಮಾನಸಿಕ ಅಸ್ವಸ್ಥತೆ ಕಾಡುತ್ತಿದೆ ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಕಿಡಿಕಾರಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸುಳ್ಳಿಗೆ ಮತ್ತೊಂದು ಹೆಸರೇ ಕುಮಾರಸ್ವಾಮಿ. ಅವರು ಮೆಂಟಲ್ ಆಗಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿದರು.



ನಟಿ ರನ್ಯಾರಾವ್ ದುಬೈನಿಂದ ಚಿನ್ನ ತರುತ್ತಿರುವ ಮಾಹಿತಿಯನ್ನು ಅಧಿಕಾರಿಗಳಿಗೆ ನೀಡಿದ್ದೇ ಕಾಂಗ್ರೆಸ್‌ನ ಮಹಾನಾಯಕ ಎಂದು ಎಚ್.ಡಿ.ಕುಮಾರಸ್ವಾಮಿ ಆರೋಪಿಸಿದರು. ಇದಕ್ಕೆ ಡಿ.ಕೆ.ಶಿವಕುಮಾರ್ ತೀಕ್ಷ್ಣವಾಗಿ ಪ್ರತಿಕ್ರಿಯಿಸಿದ್ದಾರೆ.

ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಬೇರೆ ಜಿಲ್ಲೆಯಿಂದ ಬಂದವರು, ನಾವು ಬೆಂಗಳೂರಿನವರು, ನಮ ಅಸಿತೆಯನ್ನು ಉಳಿಸಿಕೊಳ್ಳಲು ರಾಮನಗರ ಹೆಸರನ್ನು ಬದಲಾವಣೆ ಮಾಡಲಾಗಿದೆ, ಇದರಿಂದ ಅವರಿಗಾಗಿರುವ ತೊಂದರೆಯೇನು? ರಾಮನಗರವನ್ನು ಬದಲಾವಣೆ ಮಾಡುತ್ತಿಲ್ಲ. ರಾಮನಗರ ರಾಮನಗರವಾಗಿಯೇ ಉಳಿಯುತ್ತದೆ. ಕುಮಾರಸ್ವಾಮಿ ಯವರೇಕೆ ಹಾಸನ ಜಿಲ್ಲೆಯಿಂದ ಇಲ್ಲಿಗೆ ಬಂದರು. ಹಾಸನದಲ್ಲೆ? ರಾಜಕಾರಣ ಮಾಡಬಹುದಿತ್ತಲ್ಲವೇ? ಎಂದು ಪ್ರಶ್ನಿಸಿದರು.

ಕುಮಾರಸ್ವಾಮಿ ಮೊದಲು ಹೆಸರು ಬದಲಾವಣೆ ಮಾಡಿಕೊಳ್ಳಲಿ. ಅವರ ಹೆಸರ ಮುಂದಿರುವ ಊರಿನ ಇನ್ಶಿಲ್ ಅನ್ನು ಬದಲಾವಣೆ ಮಾಡಿಕೊಳ್ಳಲಿ. ಈಗಲೂ ಅವರು ಎಚ್‌ಡಿ ಎಂದು ಇಟ್ಟುಕೊಂಡಿರುವುದೇಕೆ? ಎಂದರು.ಮದ್ರಾಸ್‌ಗೆ ಚೆನ್ನೈ ಎಂದು ಗುಲ್ಬರ್ಗವನ್ನು ಕಲಬುರಗಿ ಎಂದು ಬಿಜಾಪುರವನ್ನು ವಿಜಯಪುರ ಎಂದು ಬದಲಾವಣೆ ಮಾಡಲಾಗಿದೆ. ಇದರಿಂದ ಅವರಿಗಾಗುವ ತೊಂದರೆಯೇನು ಎಂದು ಪ್ರಶ್ನಿಸಿದರು.

ರಿಯಲ್ ಎಸ್ಟೇಟ್ ಅಭಿವೃದ್ಧಿಗಾಗಿ ಹೆಸರು ಬದಲಾವಣೆ ಮಾಡಲಾಗಿದೆ ಎಂಬ ಆರೋಪಕ್ಕೆ ಪ್ರತಿಕ್ರಿಯಿಸಿದ ಡಿ.ಕೆ.ಶಿವಕುಮಾರ್, ಹೌದು. ರೈತರ, ಹಳ್ಳಿಜನಗಳ ಅಭಿವೃದ್ಧಿಯಾಗಬೇಕು. ನಮ ಆಸ್ತಿಗಳ ಬೆಲೆ ಜಾಸ್ತಿಯಾಗಬೇಕು. ಪ್ರತಿಯೊಬ್ಬ ರೈತನಿಗೂ ಒಳ್ಳೆಯದಾಗಬೇಕು. ವಿದೇಶಗಳಿಂದ ಬಂದು ಬಂಡವಾಳ ಹೂಡಿಕೆ ಮಾಡಬೇಕು. ಉದ್ಯೊ?ಗ ಸಿಗಬೇಕು ಎಂಬುದು ನಮ ಆಸೆ ಎಂದರು.

ನ್ಯಾಷನಲ್ ಹೆರಾಲ್ಡ್ ಸಂಸ್ಥೆಗೆ ನಾನು 25 ಲಕ್ಷ ರೂ. ನೀಡಿದ್ದೇನೆ. ನಮ ಟ್ರಸ್ಟ್‌ನಿಂದ 2.50 ಕೋಟಿ ರೂ. ನೀಡಿದ್ದೇವೆ. ನಾವೇನು ಕದ್ದು ಕೊಟ್ಟಿಲ್ಲ. ಸಂಪಾದನೆ ಮಾಡಿದ ಆಸ್ತಿಯಲ್ಲಿ ರಾಜಾರೋಷವಾಗಿ ನಮ ಪಕ್ಷ ನಡೆಸುವ ಪತ್ರಿಕೆಗೆ ಕೊಟ್ಟಿದ್ದೇವೆ. ಇದರಲ್ಲಿ ತಪ್ಪೇನು ಎಂದು ಸಮರ್ಥಿಸಿಕೊಂಡರು.

# 51,000 ಅತಿಥಿ ಶಿಕ್ಷಕರ ನೇಮಕಾತಿಗೆ ರಾಜ್ಯ ಸರ್ಕಾರ ಆದೇಶ

**ಬೆಂಗಳೂರು,ಮೇ.24–**ಶಿಕ್ಷಕರ ಕೊರತೆಯನ್ನು ನೀಗಿಸುವ ಸಲುವಾಗಿ, ರಾಜ್ಯ ಸರ್ಕಾರ 2025–26 ಶೈಕ್ಷಣಿಕ ಸಾಲಿನಲ್ಲಿ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಿಗೆ 51,000 ಅತಿಥಿ ಶಿಕ್ಷಕರನ್ನು ನೇಮಿಸುವ ಆದೇಶ ನೀಡಿದೆ.




ಮೇ 29, 2025 ರಂದು ಶಾಲೆಗಳು ಪುನರಾರಂಭವಾಗಲಿರುವ ಹಿನ್ನೆಲೆಯಲ್ಲಿ ಶೈಕ್ಷಣಿಕ ಚಟುವಟಿಕೆಗಳು ನಿರಂತರವಾಗಿ ಹಾಗೂ ಸಮಯಕ್ಕೆ ಸರಿಯಾಗಿ ಆರಂಭವಾಗಲಿ ಎಂಬ ಉದ್ದೇಶ ಈ ತಾತ್ಕಾಲಿಕ ನೇಮಕಾತಿಗೆ ಆದೇಶ ಹೊರಡಿಸಿದೆ.

2025–26 ನೇ ಶೈಕ್ಷಣಿಕ ಸಾಲಿಗೆ ಖಾಲಿಯಿರುವ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ಶಿಕ್ಷಕರುಗಳ ಹುದ್ದೆಗಳಿಗೆದುರಾಗಿ ಶೈಕ್ಷಣಿಕ ಹಿತದೃಷ್ಟಿಯಿಂದ ಅತಿಥಿ ಶಿಕ್ಷಕರುಗಳನ್ನು ತಾತ್ಕಾಲಿಕವಾಗಿ ನೇರ ನೇಮಕಾತಿ ಮೂಲಕ ಶಿಕ್ಷಕರನ್ನು ಭರ್ತಿ ಮಾಡುವವರೆಗೆ ಅಥವಾ ಶೈಕ್ಷಣಿಕ ವರ್ಷದ ಅಂತ್ಯದವರೆಗೆ ಎಂಬ ಷರತ್ತಿಗೊಳಪಟ್ಟು ಅತಿಥಿ ಶಿಕ್ಷಕರನ್ನು ತಾತ್ಕಾಲಿಕವಾಗಿ ನೇಮಕ ಮಾಡಿಕೊಳ್ಳಲು ಸರ್ಕಾರವು ಮಂಜೂರಾತಿ ನೀಡಿ ಆದೇಶಿಸಿದೆ.

ರಾಜ್ಯ ಸರ್ಕಾರದ ಈ ತ್ವರಿತ ಕ್ರಮವು ವಿದ್ಯಾರ್ಥಿಗಳ ಶಿಕ್ಷಣ ನಿರಂತರವಾಗಿರಿಸಲು ಸರ್ಕಾರದ ಬದ್ಧತೆಯನ್ನು ಪುನರುಚ್ಚರಿಸುತ್ತದೆ.


51,000 ಅತಿಥಿ ಶಿಕ್ಷಕರ ಪೈಕಿ 40,000ರನ್ನು ಸರ್ಕಾರಿ ಪ್ರಾಥಮಿಕ ಶಾಲೆಗಳಿಗೆ ಹಾಗೂ ಉಳಿದ 11,000ರನ್ನು ಸರ್ಕಾರಿ ಪ್ರೌಢ ಶಾಲೆಗಳಿಗೆ ನೇಮಿಸಿ ಆದೇಶಿಸಿದೆ.

"ವಿದ್ಯಾರ್ಥಿಗಳು ಶಿಕ್ಷಕರ ಕೊರತೆಯಿಂದ ಶಿಕ್ಷಣದಿಂದ ವಂಚಿತರಾಗಬಾರದು ಎಂಬುದು ನಮ್ಮ ಮುಖ್ಯ ಗುರಿ. ಈ ತ್ವರಿತ ನಿರ್ಧಾರ ಶೈಕ್ಷಣಿಕ ಕೊರತೆಯನ್ನು ಪೂರೈಸಲು ಅಗತ್ಯವಾಗಿದೆ," ಎಂದು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವ ಶ್ರೀ ಮಧು ಬಂಗಾರಪ್ಪ ಹೇಳಿದ್ದಾರೆ.

"ಹೊಸ ಶೈಕ್ಷಣಿಕ ವರ್ಷ ಆರಂಭದ ದಿನದಿಂದಲೇ ಗುಣಮಟ್ಟದ ಶಿಕ್ಷಣ ಎಲ್ಲರಿಗೂ ಲಭ್ಯವಾಗುವುದು ನಮ್ಮ ಆದ್ಯತೆ," ಎಂದೂ ಅವರು ತಿಳಿಸಿದರು. ಅತಿಥಿ ಶಿಕ್ಷಕರಿಗೆ ನೀಡಲಾಗುವ ಗೌರವಧನದ ಪಾವತಿಗಾಗಿ ಅವಶ್ಯವಿರುವ ಅನುದಾನದ ವಿವರ ಹಾಗೂ ಅಥಿತಿ ಶಿಕ್ಷಕರ ಜಿಲ್ಲಾ, ತಾಲ್ಲೂಕುವಾರು ವಿವರಗಳೊಂದಿಗೆ ಪ್ರಸ್ತಾವನೆಯನ್ನು ಸಲ್ಲಿಸುವಂತೆ ಸೂಚಿಸಿದೆ.

# ಬೆಂಗಳೂರಲ್ಲಿ ಶುರುವಾಯ್ತು ಕೊರೋನಾ ಹಾವಳಿ, ಜೊತೆಗೆ ಡೆಂಘಿ ಕಾಟ

**ಬೆಂಗಳೂರು, ಮೇ.24–**ರಾಜ್ಯದಲ್ಲಿ ಮತ್ತೆ ಕೊರೊನಾ ಸೋಂಕು ವಕ್ಕರಿಸುವ ಸಾಧ್ಯತೆಗಳು ನಿಚ್ಚಳವಾಗಿದೆ. ನಗರದ ವಾಣಿ ವಿಲಾಸ ಆಸ್ಪತ್ರೆಯಲ್ಲಿ 9 ತಿಂಗಳ ಮಗುವಿಗೆ ಕೊರೊನಾ ಸೋಂಕು ಇರುವುದು ದೃಢಪಟ್ಟಿರುವುದರಿಂದ ನಗರದಲ್ಲಿ ಆತಂಕ ಶುರುವಾಗಿದೆ.ಕೊರೊನಾ ಸೋಂಕು ತಗಲಿರುವ ಮಗು ಹೊಸಕೋಟೆ ಮೂಲದ ಪೋಷಕರಿಗೆ ಸೇರಿದ್ದು ಎಂದು ತಿಳಿದುಬಂದಿದೆ.



ಜ್ವರದಿಂದ ಬಳಲುತ್ತಿದ್ದ ಮಗುವನ್ನು ಪರೀಕ್ಷಿಸಿದಾಗ ಕೊರೊನಾ ಪಾಸಿಟಿವ್ ಇರೋದು ಪತ್ತೆಯಾಗಿದೆ ಎಂದು ಆಸ್ಪತ್ರೆ ಮೂಲಗಳಿಂದ ಮಾಹಿತಿ ಲಭ್ಯವಾಗಿದೆ.ಈವರೆಗೆ ರಾಜ್ಯದಲ್ಲಿ ಒಟ್ಟು 22 ಸಕ್ರಿಯ ಕೊರೋನಾ ಕೇಸ್ ಪತ್ತೆಯಾಗಿವೆ. ಕಳೆದ ವಾರದಲ್ಲಿ 165 ಮಂದಿಗೆ ಕೋರನಾ ಪರೀಕ್ಷೆ ನಡೆಸಲಾಗಿದ್ದು ಅವರಲ್ಲಿ 9 ಜನರಿಗೆ ಕೋವಿಡ್ ಪಾಸಿಟಿವ್ ಇರುವುದು ದೃಢಪಟ್ಟಿದೆ.


ಇಲ್ಲಿಯವರೆಗೆ 22 ಸಕ್ರಿಯೆ ಕೊರೋನಾ ಸೋಂಕು ಪ್ರಕರಣ ವರದಿಯಾರೂ ಆಸತ್ರೆಗೆ ದಾಖಲಾಗಿಲ್ಲ. ಜತೆಗೆ ತೀವ್ರ ಲಕ್ಷಣಗಳು ಪತ್ತೆಯಾಗಿಲ್ಲ. ಹೀಗಾಗಿ ರೂಪಾಂತರಿ ಆತಂಕ ಬೇಡ ಎಂದು ಆರೋಗ್ಯ ಇಲಾಖೆ ಅಧಿಕಾರಿಗಳು ತಿಳಿಸಿದ್ದಾರೆ.

**ಡೆಂಘೀ ಉಲ್ಬಣ;** ಕೊರೊನಾ ಸೋಂಕಿನ ಜತೆಗೆ ನಗರದಲ್ಲಿ ಡೆಂಘೀ ಪ್ರಕರಣಗಳು ಹೆಚ್ಚಾಗುತ್ತಿರುವುದು ಕಂಡು ಬಂದಿದೆ.ಪೂರ್ವ ಮುಂಗಾರು ಮಳೆಯ ಆರ್ಭಟದ ಬೆನ್ನಲ್ಲೇ ಸಾಂಕ್ರಾಮಿಕ ರೋಗಗಳು ಹೆಚ್ಚಾಗುತ್ತಿವೆ. ಡೆಂಘೀ, ಮಲೇರಿಯಾ, ಚಿಕುನ್ ಗುನ್ಯಾ ಪ್ರಕರಣಗಳು ಹೆಚ್ಚಿನ ಪ್ರಮಾಣದಲ್ಲಿ ದಾಖಲಾಗುತ್ತಿದೆ. ಜತೆಗೆ ಸಾಮಾನ್ಯ ಜ್ವರ, ವೈರಲ್ ಸೋಂಕು, ನೆಗಡಿ, ಸುಸ್ತು, ತಲೆನೋವು ಪ್ರಕರಣಗಳೂ ಹೆಚ್ಚಳವಾಗುತ್ತಿದೆ. ಕಲುಷಿತ ನೀರು ಸೇವನೆಯಿಂದ ಬರುವ ಗ್ಯಾಸ್ಟ್ರೊ ಎಂಟರೈಟಿಸ್ ಕೂಡ ಕೆಲವರಲ್ಲಿ ಕಾಣಿಸಿಕೊಂಡಿದೆ.

ಕೆ.ಸಿ.ಜನರಲ್, ವಿಕ್ಟೋರಿಯಾ ಸೇರಿ ಇತರೆ ಆಸ್ಪತ್ರೆಗಳಲ್ಲಿ ಹೊರರೋಗಿ ವಿಭಾಗದಲ್ಲಿ ರೋಗಿಗಳ ಹೆಚ್ಚಳವಾಗುತ್ತಿದ್ದು, ನಗರದಲ್ಲಿ ಸಕ್ರಿಯ ಡೆಂಘೀ ಪ್ರಕರಣಗಳ ಸಂಖ್ಯೆ 500ಕ್ಕೂ ಹೆಚ್ಚಿದೆ ಎಂದು ಅಂದಾಜಿಸಲಾಗಿದೆ.

# ತೆಲಂಗಾಣ : ಬಂಧಿತ ಇಬ್ಬರು ಉಗ್ರರು 7 ದಿನ ಪೊಲೀಸ್ ಕಸ್ಟಡಿಗೆ

**ವಿಜಯನಗರಂ,ಮೇ.24–** ಇಲ್ಲಿನ ನ್ಯಾಯಾಲಯವು ಇಬ್ಬರು ಶಂಕಿತ ಭಯೋತ್ಪಾದಕರನ್ನು ಏಳು ದಿನಗಳ ಪೊಲೀಸ್ ಕಸ್ಟಡಿಗೆ ಕಳುಹಿಸಿದೆ. ಆಂಧ್ರಪ್ರದೇಶ ಮತ್ತು ತೆಲಂಗಾಣ ಪೊಲೀಸರು ನಡೆಸಿದ ಜಂಟಿ ಕಾರ್ಯಾಚರಣೆಯಲ್ಲಿ ಸ್ಫೋಟಕಗಳೊಂದಿಗೆ ಇಬ್ಬರು ಶಂಕಿತರಾದ ಸಿರಾಜ್ ಉರ್ ರೆಹಮಾನ್ (29) ಮತ್ತು ಸೈಯದ್ ಸಮೀರ್ (28) ಅವರನ್ನು ಬಂಧಿಸಲಾಗಿತ್ತು.



ನ್ಯಾಯಾಲಯವು ರೆಹಮಾನ್ ಮತ್ತು ಸಮೀರ್ ಅವರನ್ನು ಏಳು ದಿನಗಳ ಪೊಲೀಸ್ ಕಸ್ಟಡಿಗೆ ನೀಡಿದೆ ಎಂದು ವಿಜಯನಗರಂ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಸೌಮ್ಯ ಲತಾ ಪಿಟಿಐಗೆ ತಿಳಿಸಿದ್ದಾರೆ.

ಇಬ್ಬರನ್ನು ಪ್ರಸ್ತುತ ವಿಶಾಖಪಟ್ಟಣಂ ಕೇಂದ್ರ ಕಾರಾಗೃಹದಲ್ಲಿ ಇರಿಸಲಾಗಿದೆ.ಗೃಹ ಸಚಿವಾಲಯದಿಂದ ನಮಗೆ ಆದೇಶ ಬಂದರೆ, ಪ್ರಕರಣವನ್ನು ರಾಷ್ಟ್ರೀಯ ತನಿಖಾ ಸಂಸ್ಥೆಗೆ ಹಸ್ತಾಂತರಿಸಲಾಗುವುದು. ಅಲ್ಲಿಯವರೆಗೆ, ಪೊಲೀಸರು ಕಸ್ಟಡಿಯಲ್ಲಿ ಅವರನ್ನು ವಿಚಾರಣೆ ನಡೆಸುತ್ತಾರೆ ಎಂದು ಎಎಸ್ಪಿ ಹೇಳಿದರು.

ಖಚಿತ ಸುಳಿವಿನ ಮೇರೆಗೆ ರೆಹಮಾನ್ ಅವರನ್ನು ಬಂಧಿಸಲಾಯಿತು ಮತ್ತು ಇಲ್ಲಿ ನಡೆದ ಶೋಧ ಕಾರ್ಯಾಚರಣೆಯ ಸಮಯದಲ್ಲಿ ಅವರ ಆವರಣದಿಂದ ಅಮೋನಿಯಾ, ಸಲ್ಫರ್ ಮತ್ತು ಅಲ್ಯೂಮಿನಿಯಂ ಪುಡಿಯಂತಹ ಸ್ಫೋಟಕಗಳನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಬಾಂಬ್ ತಯಾರಿಸಿದ್ದಾಗಿ ರೆಹಮಾನ್ ತಪ್ಪೊಪ್ಪಿಕೊಂಡ ಆಧಾರದ ಮೇಲೆ, ತೆಲಂಗಾಣ ಪೊಲೀಸರೊಂದಿಗೆ ಜಂಟಿ ಕಾರ್ಯಾಚರಣೆ ನಡೆಸಿ ಹೈದರಾಬಾದ್‌ನ ಬೋಯಿಗುಡದಿಂದ ಸಮೀರ್‌ನನ್ನು ಬಂಧಿಸಲಾಗಿದೆ ಎಂದು ಅವರು ತಿಳಿಸಿದ್ದಾರೆ. ರೆಹಮಾನ್ ಮತ್ತು ಸಮೀರ್ ವಿರುದ್ಧ ಸ್ಫೋಟಕ ವಸ್ತುಗಳ ಕಾಯ್ದೆ, ಕಾನೂನುಬಾ ಹಿರ ಚಟುವಟಿಕೆಗಳು (ತಡೆಗಟ್ಟುವಿಕೆ) ಕಾಯ್ದೆ ಮತ್ತು ಭಾರತೀಯ ನಾಗರಿಕ್ ಸುರಕ್ಷಾ ಸಂಹಿತಾ ಅಡಿಯಲ್ಲಿ ಪ್ರಕರಣ ದಾಖಲಿಸಲಾಗಿದೆ.

# ಭಯೋತ್ಪಾದನೆಗೆ ಪಾಕ್ ಕುಮ್ಮಕ್ಕು: ಅಮಿತ್ ಶಾ

**ನವದೆಹಲಿ,ಮೇ.24–**ಭಾರತದ ಒಳಗೆ ಪಾಕಿಸ್ತಾನ ಭಯೋತ್ಪಾದನೆಯನ್ನು ಪೋಷಿಸುತ್ತಿದೆ ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಪಾಕಿಸ್ತಾನದ ವಿರುದ್ಧ ಇಂದು ನೇರ ಆರೋಪ ಮಾಡಿದ್ದಾರೆ.



ನವದೆಹಲಿಯಲ್ಲಿಂದು ಗಡಿ ಭದ್ರತಾ ಪಡೆಯ ಕಾರ್ಯಕ್ರಮದಲ್ಲಿ ಮಾತನಾಡಿದ ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ನೆರೆ ದೇಶವು ಭಾರತದ ಸಾರ್ವಭೌಮತ್ವವನ್ನು ಅಸ್ಥಿರಗೊಳಿಸುವ ಗುರಿಯೊಂದಿಗೆ ಭಯೋತ್ಪಾದನೆಯನ್ನು ಪೋಷಿಸುತ್ತಿದೆ. ಭಯೋತ್ಪಾದನೆಯ ಉಗಮ ಸ್ಥಾನವಾಗಿ ಪಾಕಿಸ್ತಾನ ಕಾರ್ಯನಿರ್ವಹಿಸುತ್ತಿದೆ ಎಂದು ವಾಗ್ದಾಳಿ ನಡೆಸಿದರು.

ಜಮ್ಮು–ಕಾಶ್ಮೀರದ ಪಹಲ್ಗಾಮ್‌ನಲ್ಲಿ ಅಮಾಯಕರನ್ನು ಭಯೋತ್ಪಾದಕರು ಹತ್ಯೆ ಮಾಡಿದ ನಂತರ ಆಪರೇಷನ್ ಸಿಂಧೂರದ ಮೂಲಕ ಭಯೋತ್ಪಾದಕರ ನೆಲೆಗಳನ್ನು ನಾಶ ಮಾಡಿ ಕ್ರೂರ ಹತ್ಯೆಗಳಿಗೆ ಪ್ರತೀಕಾರವನ್ನು ತೀರಿಸಿಕೊಂಡಿದ್ದೇವೆ ಎಂದರು.

ಭಾರತದ ಸೇನಾ ಪಡೆಗಳು ಪಾಕಿಸ್ತಾನದ ಭಯೋತ್ಪಾದಕ ಮೂಲ ಸೌಕರ್ಯದ ಮೇಲೆ ದಾಳಿ ಮಾಡಿದಾಗ ಪಾಕಿಸ್ತಾನ ಸೇನೆಯು ಭಾರತವನ್ನು ಏಕೆ ಗುರಿಯಾಗಿಸಿಕೊಂಡಿದೆ ಎಂದು ತೀಕ್ಷ್ಣವಾಗಿ ಪ್ರಶ್ನಿಸಿರುವ ಅಮಿತ್ ಶಾ ಅವರು ಭಾರತ ಪಾಕಿಸ್ತಾನದೊಳಗಿನ ಭಯೋತ್ಪಾದಕ ಮೂಲಸೌಕರ್ಯವನ್ನು ನಾಶಪಡಿಸಿದ್ದೇವೆ.

ಪಾಕಿಸ್ತಾನವನ್ನು ಗುರಿಯಾಗಿಸಿಕೊಂಡು ನಾವು ಆಪರೇಷನ್ ಸಿಂಧೂರ ನಡೆಸಿಲ್ಲ. ಭಯೋತ್ಪಾದಕರ ನಿರ್ನಾಮವೆ ಆಪರೇಷನ್‌ಸಿಂಧೂರದ ಉದ್ದೇಶ ಎಂದು ಹೇಳಿದರು.

ಭಾರತೀಯ ಸೇನೆ ಭಯೋತ್ಪಾದಕರ ನೆಲೆಗಳ ಮೇಲೆ ದಾಳಿ ಮಾಡಿದ ನಂತರ ಪಾಕಿಸ್ತಾನ ಸೇನಾಧಿಕಾರಿಗಳು ಕದನ ವಿರಾಮವನ್ನು ಉಲ್ಲಂಘಿಸಿದ್ದು ಸರಿಯಲ್ಲ.

ಕದನ ವಿರಾಮವನ್ನು ಮುರಿದು ಗಡಿಯಲ್ಲಿರುವ ಅಮಾಯಕ ನಾಗರೀಕರನ್ನು ಗುರಿಯಾಗಿಸಿಕೊಂಡು ಗುಂಡಿನ ದಾಳಿಯನ್ನು ನಡೆಸಿದ್ದನ್ನು ಅವರು ಖಂಡಿಸಿ ಪಾಕಿಸ್ತಾನ ಭಾರತದಲ್ಲಿ ಭಯೋತ್ಪಾದನೆಯನ್ನು ಪೋಷಿಸುತ್ತಿದೆ. ಇದನ್ನು ಹತ್ತಿಕ್ಕುತ್ತೇವೆ ಎಂದು ಹೇಳಿದರು.

ಪಹಲ್ಗಾಮ್ ಘಟನೆಯ ನಂತರ ಭಯೋತ್ಪಾದನೆಯನ್ನು ಪೋಷಿಸುತ್ತಿರುವ ಪಾಕಿಸ್ತಾನದ ಮುಖವಾಡವನ್ನು ಕಳಚಲು ಭಾರತೀಯ ಸಂಸದರ ನಿಯೋಗ ಹಲವು ದೇಶಗಳಿಗೆ ಭೇಟಿ ನೀಡಿ ಪಾಕಿಸ್ತಾನದ ನಿಜ ಬಣ್ಣವನ್ನು ಬಯಲು ಮಾಡುತ್ತಿರುವಾಗಲೇ ಕೇಂದ್ರ ಗೃಹ ಸಚಿವ ಈ ಹೇಳಿಕೆ ಮಹತ್ವ ಪಡೆದುಕೊಂಡಿದೆ.

# ಬಾಂಗ್ಲಾ: ರಾಜೀನಾಮೆಗೆ ಮುಂದಾದ ಯೂನಸ್



**ನವದೆಹಲಿ, ಮೇ.24–** ಬಾಂಗ್ಲಾದೇಶದ ಮಧ್ಯಂತರ ಸರ್ಕಾರದ ಮುಖ್ಯಸ್ಥ ಮುಹಮ್ಮದ್ ಯೂನಸ್ ರಾಜೀನಾಮೆ ನೀಡುವ ವಿಚಾರ ಮುನ್ನೆಲೆಗೆ ಬಂದಿದ್ದು ರಾಜಕೀಯ ಪಕ್ಷಗಳಲ್ಲಿ ಒಮ್ಮತದ ಕೊರತೆಯಿಂದಾಗಿ ಕೆಲಸ ಮಾಡುವುದು ಕಷ್ಟಕರವಾಗು ತ್ತಿದೆ ಎಂದು ಯೂನಸ್ ಹೇಳಿಕೊಂಡಿದ್ದಾರೆ.

ಇನ್ನು ಈ ಕುರಿತು ನ್ಯಾಷನಲ್ ಸಿಟಿಜನ್ ಪಾರ್ಟಿ (ಎನ್‌ಸಿಪಿ) ಸಂಚಾಲಕ ನಹಿದ್ ಇಸ್ಲಾಂ ಅವರು ಹೇಳಿಕೆ ನೀಡಿದ್ದು ಕಳೆದ ಕೆಲ ದಿನಗಳಿಂದ ಯೂನಸ್ ರಾಜೀನಾಮೆ ನೀಡುವ ಸುದ್ದಿಗಳು ಹರಿದಾಡುತ್ತಿತ್ತು.

ಈ ಕುರಿತು ಗುರುವಾರ ಅವರನ್ನು ಭೇಟಿಯಾಗಿ ಚರ್ಚಿಸಿದ ವೇಳೆ ಪ್ರಸ್ತುತ ರಾಜಕೀಯ ಪರಿಸ್ಥಿತಿ ಹೇಗಿದೆ ಎಂದರೆ ಕೆಲಸ ಮಾಡಲು ಸಾಧ್ಯವಿಲ್ಲದಂತಿದೆ. ಹಾಗಾಗಿ ರಾಜೀನಾಮೆ ನಿರ್ಧಾರಕ್ಕೆ ಬಂದಿರುವುದಾಗಿ ಹೇಳಿಕೊಂಡಿದ್ದಾರೆ ಎಂದು ನಹಿದ್ ಹೇಳಿಕೆ ಉಲ್ಲೇಖಿಸಿ ಬಿಬಿಸಿ ಬಾಂಗ್ಲಾ ವರದಿ ಮಾಡಿದೆ.

ದೇಶದಲ್ಲಿ ನಡೆದ ಸಾಮೂಹಿಕ ದಂಗೆಯ ಬಳಿಕ ದೇಶದಲ್ಲಿ ಬದಲಾವಣೆ ಮತ್ತು ಸುಧಾರಣೆಗಾಗಿ ಯೂನಸ್ ಅವರನ್ನು ಮುಖ್ಯ ಸಲಹೆಗಾರರನ್ನಾಗಿ ಕರೆತರಲಾಯಿತು. ಆದರೆ ಈಗ, ವಿವಿಧ ರಾಜಕೀಯ ಪಕ್ಷಗಳು ಕೆಲಸ ಮಾಡಲು ಸಾಧ್ಯವಾಗದ ಪರಿಸ್ಥಿತಿಯನ್ನು ಸೃಷ್ಟಿಸಿವೆ.

ಇದರಿಂದ ಯೂನಸ್ ಅವರ ಕೈಗೆ ಕೋಳ ಹಾಕಲ್ಪಟ್ಟಂತಾಗಿದೆ ಯಾವುದೇ ಕೆಲಸ ಮಾಡಲು ಸಾಧ್ಯವಾಗದ ಸ್ಥಿತಿ ಅವರದ್ದಾಗಿದೆ. ಆದರೂ ರಾಜೀನಾಮೆ ನಿರ್ಧಾರ ಕೈಗೊಳ್ಳುವ ಮೊದಲು ಒಮ್ಮೆ ಯೋಚಿಸಿ ಎಂದು ನಹಿದ್ ಇಸ್ಲಾಂ ಕೇಳಿಕೊಂಡಿದ್ದಾರೆ ಎನ್ನಲಾಗಿದೆ.

# ರಸ್ತೆ ಅಪಘಾತದಲ್ಲಿ ಬಿಜೆಪಿ ಮುಖಂಡ ಅಂಬಾರಾಯ ಚಲಗೇರಿ ಸಾವು

**ಕಲಬುರಗಿ,ಮೇ.24–**ನಗರ ಹೊರವಲಯದ ಸಿರನೂರ ಬಳಿಯ ಭಾರತಿ ವಿದ್ಯಾಕೇಂದ್ರದ ಹತ್ತಿರ ಸಂಭವಿಸಿದ ಅಪಘಾತದಲ್ಲಿ ಬಿಜೆಪಿ ಎಸ್ಸಿ ಮೋರ್ಚಾ ಜಿಲ್ಲಾ ಉಪಾಧ್ಯಕ್ಷ ಅಂಬಾರಾಯ ಚಲಗೇರಿ ಮೃತಪಟ್ಟಿದ್ದಾರೆ.



ಗುರುವಾರ ಮಧ್ಯಾಹ್ನ ಬೈಕ್‌ನಲ್ಲಿ ಪ್ರಯಾಣಿಸುವಾಗ ಅಪರಿಚಿತ ವಾಹನ ಡಿಕ್ಕಿ ಹೊಡೆದಿದ್ದು, ಗಂಭೀರವಾಗಿ ಗಾಯಗೊಂಡು ಸ್ಥಳದಲ್ಲಿಯೇ ಕೊನೆಯುಸಿರೆಳೆದಿದ್ದಾರೆ. ಇವರು ಸಂಬಂಧಿಕರ ದೇವರ ಕಾರ್ಯಕ್ರಮಕ್ಕೆಂದು ಬೈಕ್ ಮೇಲೆ ಕೂಡಿ ದರ್ಗಾಕ್ಕೆ ಹೋಗಿ ಕಾರ್ಯಕ್ರಮ ಮುಗಿಸಿಕೊಂಡು ಕಲಬುರಗಿಗೆ ಮರಳಿ ಬರುತ್ತಿದ್ದಾಗ ಅಪಘಾತ ಸಂಭವಿಸಿದೆ ಎಂದು ತಿಳಿದುಬಂದಿದೆ.

ಸ್ಥಳಕ್ಕೆ ಬಿಜೆಪಿ ಮುಖಂಡ, ಮಾಜಿ ಸಂಸದ ಡಾ.ಉಮೇಶ್ ಜಾಧವ್ ಭೇಟಿ ನೀಡಿದರು. ಪೊಲೀಸ್ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿದ್ದು, ಸಂಚಾರ ಠಾಣೆ–1ರಲ್ಲಿ ಪ್ರಕರಣ ದಾಖಲಾಗಿದೆ.

# ಬಹುಗ್ರಾಮ ಕುಡಿಯುವ ನೀರಿನ ಕೆರೆಗೆ ಭೇಟಿ ನೀಡಿ ಪರಿಶೀಲಿಸಿದ ತಾಪಂ ಇ.ಓ.



**ಯುವ ಮಾರ್ಗ ಸುದ್ದಿ**

**ಮಾನ್ವಿ,ಮೇ.24–** ತಾಲೂಕಿನ ಗೋರ್ಕಲ್ ಗ್ರಾಮದಲ್ಲಿನ ಅರೋಲಿ,ಕುರ್ಡಿ, ಗೋರ್ಕಲ್ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಬಹು ಗ್ರಾಮ ಕುಡಿಯುವ ನೀರಿನ ಕೆರೆಗೆ ತಾ.ಪಂ. ಇ.ಓ. ಖಾಲಿದ್ ಅಹಮ್ಮದ್ ಭೇಟಿ ನೀಡಿ ಕೆರೆಯಲ್ಲಿನ ನೀರಿನ ಪ್ರಮಾಣ ಹಾಗೂ ನೀರಿನ ಗುಣಮಟ್ಟವನ್ನು ಪರೀಕ್ಷಿಸಿ ಗೋರ್ಕಲ್ ಗ್ರಾಮ ಪಂಚಾಯಿತಿ ಅಭಿವೃದ್ದಿ ಅಧಿಕಾರಿ ಅಕ್ತರ ಪಾಷಾ ರವರಿಗೆ ಕೆರೆಯಿಂದ ಜೂಕುರು,ಕಂಬಳತ್ತಿ, ವಲ್ಕಂದಿನ್ನಿ, ರಾಜೋಳ್ಳಿ, ಕುರ್ಡಿ,ಗೋರ್ಕಲ್ ಸೇರಿದಂತೆ ವಿವಿಧ ಗ್ರಾಮಗಳಿಗೆ ಶುದ್ದ ಕುಡಿಯುವ ನೀರನ್ನು ಪೂರೈಕೆ ಮಾಡುವುದಕ್ಕೆ ಕ್ರಮ ಕೈಗೊಳ್ಳಬೇಕು. ಕೆರೆಯಲ್ಲಿನ ನೀರು ಕಲುಷಿತ ವಾಗದಂತೆ ನೋಡಿಕೊಳ್ಳಿ. ಕೆರೆಯ ನೀರು ಪೋಲಾಗದಂತೆ ಅಗತ್ಯ ಕ್ರಮ ಕೈಗೊಳ್ಳಬೇಕು. ಕೆರೆಯಲ್ಲಿ ಮಳೆಯ ನೀರು ಸೇರಿ ಕುಡಿಯುವ ನೀರು ಕಲುಷಿತ ಗೊಳ್ಳದಂತೆ ಅಗತ್ಯ ಮುನ್ನೇಚ್ಚರಿಕೆ ವಹಿಸಬೇಕು. ನಿರಂತರವಾಗಿ ಕುಡಿಯುವ ನೀರಿನ ಕೆರೆಗೆ ಭೇಟಿ ನೀಡಿ ನೀರಿನ ಸಂಗ್ರಹಣೆಯ ಪ್ರಮಾಣ ಹಾಗೂ ನೀರಿನ ಗುಣಮಟ್ಟವನ್ನು ಪರೀಕ್ಷಿಸುತ್ತಿರಬೇಕು ಗ್ರಾಮದ ಜನರಿಗೆ ಸಮರ್ಪಕ ನೀರು ಪೂರೈಕೆಗೆ ಕ್ರಮ ಕೈಗೊಳ್ಳುವಂತೆ ಸೂಚನೆ ನೀಡಿದರು.

ತಾ.ಪಂ. ಕಾಯಕ ನಿರ್ದೇಶಕಿ ದೀಪ ಅರಳಿಕಟ್ಟಿ, ಗೋರ್ಕಲ್ ಗ್ರಾ.ಪಂ. ಪಿಡಿಓ ಅಕ್ತರ ಪಾಷಾ ಇದ್ದರು.

# ಉರುಸ್ ಅಂಗವಾಗಿ ಸಾರ್ವಜನಿಕರಿಗೆ ಪ್ರಸಾದ ವಿತರಣೆ



**ಯುವ ಮಾರ್ಗ ಸುದ್ದಿ**

**ಮಾನ್ವಿ,ಮೇ.24–** ಪಟ್ಟಣದ ಬಸವ ವೃತ್ತದಲ್ಲಿ ಸೈಯಾದ್ ಸಬ್ಜಲಿ ಸತ್ತಾರ್ ರಹಮತುಲ್ಲಾ ತಾತನವರ ಸೇವಾ ಸಮಿತಿ ವತಿಯಿಂದ ಮಾನ್ವಿ ಕುತುಬ್‌ನ ಹಜರತ್ ಸೈಯದ್ ಸಬ್ಜಲಿ ಸತ್ತಾರ್ ರಹಮತುಲ್ಲಾ ಅಲೆರವರ ಉರುಸ್ ಅಂಗವಾಗಿ ಸಾರ್ವಜನಿಕರಿಗೆ ಪ್ರಸಾದ ವಿತರಣೆ ನಡೆಸಲಾಯಿತು.

ಮಾನ್ವಿ ಮಂಡಲ ಬಿಜೆಪಿ ಅಧ್ಯಕ್ಷರಾದ ಜಿ.ಸುಧಾಕರ್, ಜಾವೀದ್ ಖಾನ್,ಗೋಪಾಲ ಇಬ್ರಾಂಪುರ್, ಮಿರ್ಜ ಅದಾಂ ಬೇಗ್,ಅಲಾಂ ಬಾಷ, ಬಂದೇನವಾಜ್,ರೆಹಮತ್ ಅಲಿ, ಹಾಶೀಂ ಕುರೇಶಿ, ಶಾಲಂ ಮುಲ್ಲ, ಸಾಬೀರ್ ಮೇಹದಿ, ಅಬ್ರರ್ ಖುರೇಶಿ, ಸೈಯಾದ್ ನಜಿರುದ್ದೀನ್ ಖಾದ್ರಿ,ರೆಹಮತ್ ಅಲಿ, ಶರಣಯ್ಯ ನಾಯಕ, ವಿಜಯಕುಮಾರ ಇಬ್ರಾಂಪುರ್ ಇದ್ದರು.

## ಇಂದು ಸಿಇಟಿ ರಿಸಲ್ಟ್

**ಬೆಂಗಳೂರು,ಮೇ.24–** ಕರ್ನಾಟಕ ಪರೀಕ್ಷಾ ಪ್ರಾಧಿಕಾರವು 2025ನೇ ಸಾಲಿನ ಸಾಮಾನ್ಯ ಪ್ರವೇಶ ಪರೀಕ್ಷೆಯ (ಯುಜಿಸಿಇಟಿ) ಫಲಿತಾಂಶವನ್ನು ಶನಿವಾರ ಪ್ರಕಟಿಸಲಿದೆ. ಬೆಳಿಗ್ಗೆ 11.30ಕ್ಕೆ ಉನ್ನತ ಶಿಕ್ಷಣ ಸಚಿವ ಡಾ.ಎಂ.ಸಿ.ಸುಧಾಕರ ಅವರು ಕೆಇಎ ಕಚೇರಿಯಲ್ಲಿ ಸಿಇಟಿ ಫಲಿತಾಂಶವನ್ನು ಅಧಿಕೃತವಾಗಿ ಪ್ರಕಟಿಸಲಿದ್ದಾರೆ ಎಂದು ಪ್ರಾಧಿಕಾರದ ಕಾರ್ಯನಿರ್ವಾಹಕ ನಿರ್ದೇಶಕ ಎಚ್.ಪ್ರಸನ್ನ ಪತ್ರಿಕಾ ಹೇಳಿಕೆಯಲ್ಲಿ ತಿಳಿಸಿದ್ದಾರೆ.

# ಓ.ಟಿ.ಆರ್ ಸಂಖ್ಯೆ ಸೃಜಿಸಿ ವಿದ್ಯಾರ್ಥಿವೇತನಕ್ಕೆ ಅರ್ಜಿ ಸಲ್ಲಿಸುವಂತೆ ಸೂಚನೆ

**ರಾಯಚೂರು,ಮೇ.24–** ಇಲ್ಲಿನ ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣ ಅಧಿಕಾರಿಗಳ ಕಾರ್ಯಾಲಯದಿಂದ 2025–26ನೇ ಸಾಲಿಗೆ ಪರಿಶಿಷ್ಟ ಪಂಗಡದ ಮೆಟ್ರಿಕ್ ಪೂರ್ವ 9 ಮತ್ತು 10ನೇ ತರಗತಿ ಹಾಗೂ ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನಕ್ಕಾಗಿ ಅರ್ಜಿ ಸಲ್ಲಿಸಲು ಎನ್.ಎಸ್.ಪಿ. ಪೋರ್ಟಲ್‌ನಲ್ಲಿ ಓ.ಟಿ.ಆರ್ ಸಂಖ್ಯೆಯನ್ನು ಸೃಜಿಸುವ ರಾಜ್ಯ ವಿದ್ಯಾರ್ಥಿವೇತನ ತಂತ್ರಾಂಶದಲ್ಲಿ ಅರ್ಜಿಯನ್ನು ಸಲ್ಲಿಸುವಂತೆ ಕೋರಲಾಗಿದೆ.

ಮೆಟ್ರಿಕ್ ಪೂರ್ವ ಹಾಗೂ ಮೆಟ್ರಿಕ್ ನಂತರದ ಕೋರ್ಸುಗಳಲ್ಲಿ ಪ್ರವೇಶ ಪಡೆಯುವ ವಿದ್ಯಾರ್ಥಿಗಳು ವಿದ್ಯಾರ್ಥಿ ವೇತನಕ್ಕಾಗಿ ಭಾರತ ಸರ್ಕಾರದ ಎಲೆಕ್ಟ್ರಾನಿಕ್ಸ್ ಮತ್ತು ಮಾಹಿತಿ ತಂತ್ರಜ್ಞಾನ ಸಚಿವಾಲಯ ಅವರು ಅಭಿವೃದ್ಧಿಪಡಿಸಿರುವ ರಾಷ್ಟ್ರೀಯ ವಿದ್ಯಾರ್ಥಿವೇತನ ಪೋರ್ಟಲ್ (ಎನ್.ಎಸ್.ಪಿ) ನಲ್ಲಿ ಒಂದು ಬಾರಿ ನೋಂದಣಿ (ಒನ್ ಟೈಮ್ ರಿಜಿಸ್ಟರ್) ಸಂಖ್ಯೆಯನ್ನು ರಚಿಸಿ ತದನಂತರ ರಾಜ್ಯ ವಿದ್ಯಾರ್ಥಿವೇತನ ತಂತ್ರಾಂಶದಲ್ಲಿ ಅರ್ಹ ಅಭ್ಯರ್ಥಿಗಳು ಅರ್ಜಿಯನ್ನು ವೆಬ್‌ಸೈಟ್ ವಿಳಾಸ: https://scholarships.gov.in ನಲ್ಲಿ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಕೇಂದ್ರ ಕಚೇರಿಯ ಸಹಾಯವಾಣಿ ಸಂಖ್ಯೆ: 080–22261789 ಅಥವಾ ಜಿಲ್ಲಾ ಕಚೇರಿಯ ದೂರವಾಣಿ ಸಂಖ್ಯೆ: 080532–220045, 9535828236 ಅಥವಾ ಆಯಾ ತಾಲೂಕು ಕಚೇರಿಗಳನ್ನು ಕಚೇರಿ ವೇಳೆಯಲ್ಲಿ ಭೇಟಿ ನೀಡಿ ಮಾಹಿತಿ ಪಡೆಯಬಹುದಾಗಿದೆ ಎಂದು ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳಾದ ರಾಜೇಂದ್ರ ಜಲ್ದಾರ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮೂವರು ಟ್ರ್ಯಾಕ್ಟರ್ ಕಳ್ಳರ ಬಂಧನ

**ಕಲಬುರಗಿ,ಮೇ.24–**ಫರತಾಬಾದ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ನಡೆದ ಟ್ರ್ಯಾಕ್ಟರ್ ಕಳ್ಳತನ ಪ್ರಕರಣಕ್ಕೆ ಸಂಬಂಧಿಸಿದಂತೆ 3 ಜನ ಆರೋಪಿತರನ್ನು ಬಂಧಿಸಿ ಬಂಧಿತರಿಂದ 11,50,000/– ರೂಪಾಯಿ ಮೌಲ್ಯದ 3 ಟ್ರ್ಯಾಕ್ಟರ್ ಗಳನ್ನು ವಶಪಡಿಸಿಕೊಳ್ಳಲಾಗಿದೆ.

ಅಫಜಲಪುರ ತಾಲ್ಲೂಕಿನ ಹಸರಗುಂಡಗಿ ಗ್ರಾಮದ ರಿಯಾಜ್ ಪಟೇಲ್ ತಂದೆ ರಸೀದ್ ಪಟೇಲ್ ಗುಡನಾಲ (25), ಫರಹತಾಬಾದ ಗ್ರಾಮದ ರಾಜಶೇಖರ ತಂದೆ ನಾಗಪ್ಪ ಮಂದರವಾಡ (20) ಮತ್ತು ಬಂದರವಾಡ ಗ್ರಾಮದ ನಾಗರಾಜ ತಂದೆ ಚಂದ್ರಕಾಂತ ಬಾಲಮಾರ್ (25) ಎಂಬುವವರನ್ನು ಬಂಧಿಸಿ 11.50 ಲಕ್ಷ ರೂ.ಮೌಲ್ಯದ 3 ಟ್ರ್ಯಾಕ್ಟರ್‌ಗಳನ್ನು ವಶಪಡಿಸಿಕೊಳ್ಳಲಾಗಿದೆ.


ಫರಹತಾಬಾದ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ನಡೆದ ಟ್ರ್ಯಾಕ್ಟರ್ ಕಳ್ಳತನ ಪ್ರಕರಣಗಳ ಪತ್ತೆಗೆ ಕಮೀಷನರ್, ಡಿಸಿಪಿಗಳಾದ ಕನಿಕಾ ಸಿಕ್ರಿವಾಲ್, ಪ್ರವೀಣ್ ಹೆಚ್.ನಾಯಕ್ ಅವರ ಮಾರ್ಗದರ್ಶನದಲ್ಲಿ, ಸಬ್–ಅರ್ಬನ್ ಉಪ ವಿಭಾಗದ ಎಸಿಪಿ ಡಿ.ಜಿ.ರಾಜಣ್ಣ ಅವರ



ನೇತೃತ್ವದಲ್ಲಿ ಫರಹತಾಬಾದ ಪೊಲೀಸ್ ಠಾಣೆ ಪಿಐ ಮಲ್ಲಿಕಾರ್ಜುನ ಸಿ.ಇಕ್ಕಳಕಿ ಮತ್ತು ಸಿಬ್ಬಂದಿಗಳನ್ನು ಒಳಗೊಂಡ ತಂಡ ರಚಿಸಲಾಗಿತ್ತು. ಈ ತಂಡ ತನಿಖೆ ನಡೆಸಿ ಮೂವರು ಟ್ರಾಕ್ಟರ್ ಕಳ್ಳರನ್ನು ಬಂಧಿಸಿ 11.50 ಲಕ್ಷ ರೂ.ಮೌಲ್ಯದ 3 ಟ್ರಾಕ್ಟರ್ ವಶಪಡಿಸಿಕೊಳ್ಳುವಲ್ಲಿ ಯಶಸ್ವಿಯಾಗಿದೆ.

ಟ್ರ್ಯಾಕ್ಟರ್ ಕಳ್ಳರ ಬಂಧಿಸುವಲ್ಲಿ ಯಶಸ್ವಿಯಾಗಿರುವ ಪೊಲೀಸ್ ಅಧಿಕಾರಿಗಳು ಮತ್ತು ಸಿಬ್ಬಂದಿ ಕಾರ್ಯವನ್ನು ನಗರ ಪೊಲೀಸ್ ಆಯುಕ್ತ ಡಾ.ಶರಣಪ್ಪ ಎಸ್.ಡಿ.ಅವರು ಶ್ಲಾಘಿಸಿದ್ದಾರೆ.

# ಚೂರಿಯಿಂದ ಇರಿದು ವ್ಯಕ್ತಿಯ ಕೊಲೆ



**ಮಂಗಳೂರು,ಮೇ,24–**ಮದುವೆ ಸಂದರ್ಭದಲ್ಲಿ ಉಂಟಾದ ವೈಮನಸ್ಯದಲ್ಲಿ ವ್ಯಕ್ತಿಯನ್ನು ಚೂರಿಯಿಂದ ಇರಿದು ಕೊಲೆ ಮಾಡಿರುವ ಘಟನೆ ನಗರ ಹೊರವಲಯದ ವಳಚ್ಚಿಲ್ ಬಳಿ ತಡರಾತ್ರಿ ನಡೆದಿದೆ. ವಾಮಂಜೂರು ನಿವಾಸಿ ಸುಲೇಮಾನ್ (50) ಕೊಲೆಯಾದ ವ್ಯಕ್ತಿಯಾಗಿದ್ದಾರೆ. ಈತನ ಸಂಬಂಧಿ ಮುಸ್ತಾಫ (30)ನನ್ನು ಪೊಲೀಸರು ಬಂಧಿಸಿದ್ದಾರೆ.

ಇದಲ್ಲದೆ ಸುಲೇಮಾನ್‌ನ ಇಬ್ಬರ ಪುತ್ರರಾದ ರಿಯಾಬ್, ಸಿಯಾಬ್ ಮೇಲೂ ಹಲ್ಲೆ ನಡೆಸಲಾಗಿದ್ದು, ಅವರನ್ನು ಜನಪ್ರಿಯ ಆಸ್ಪತ್ರೆಗೆ ದಾಖಲಿಸಲಾಗಿದೆ. ಮುಸ್ತಾಫ ಮದುವೆಯನ್ನು ಸುಲೇಮಾನ್ ಉಸ್ತುವಾರಿಯಲ್ಲಿ ಕಳೆದ 8 ತಂಗಳ ಹಿಂದೆ ನೆರವೇರಿಸಿದ್ದ.ಈ ವೇಳೆ ಸಣ್ಣ ವಿಷಯಕ್ಕೆ ಗಾಲಟೆ ನಡೆದಿತ್ತು ಕಾಲಕ್ರಮೇಣ ಮುಸ್ತಾಫ ದಂಪತ್ಯದಲ್ಲೂ ಬಿರುಕು ಮೂಡಿತ್ತು.

ಇದರಿಂದ ಕೋಪಗೊಂಡಿದ್ದ ಆರೋಪಿ ಮುಸ್ತಾಫ ನಿನ್ನಿಂದಲೇ ಇದಲ್ಲ ನಡೆದಿದೆ ಎಂದು ಹೇಳಿ ವೈಮನಸ್ಯ ಬೆಳಸಿಕೊಂಡಿದ್ದ. ಇದೇ ವಿಚಾರವಾಗಿ ಮುಸ್ತಫ ಜೊತೆ ಮಾತುಕತೆ ನಡೆಸಲು ತನ್ನ ಇಬ್ಬರು ಪುತ್ರರೊಂದಿಗೆ ಸುಲೇಮಾನ್ ಕಳೆದ ರಾತ್ರಿ ವಳಚ್ಚಿಲ್ ಬಂದಿದ್ದಾಗ ಮಾತಿಗೆ ಮಾತು ಬೆಳೆದು ಅದು ವಿಕೋಪಕ್ಕೆ ತಿರುಗಿದೆ.

ಏಕಾಏಕಿ ಮುಸ್ತಫ ಚೂರಿಯಿಂದ ಸುಲೇಮಾನ್‌ಗೆ ಹಲವು ಬಾರಿ ಇರಿದಿದ್ದಾನೆ.ಬಿಡಿಸಲು ಹೋದ ಅವರ ಮಕ್ಕಳ ಮೇಲೂ ಹಲ್ಲೆ ನಡೆದಿದೆ. ಗಂಭೀರವಾಗಿ ಗಾಯಗೊಂಡಿದ್ದ ಸುಲೇಮಾನ್‌ನನ್ನು ತಕ್ಷಣ ಆಸ್ಪತ್ರೆಗೆ ಸೇರಿಸಿ ಚಿಕಿತ್ಸೆನೀಡಿದರೂ ಫಲಕಾರಿಯಾಗದೆ ಮೃತಪಟ್ಟಿದ್ದಾರೆ. ಪ್ರಕರಣ ದಾಖಳಿಸಿ ಆರೋಪಿ ಮುಸ್ತಫನನ್ನು ಮಂಗಳೂರು ಗ್ರಾಮಾಂತರ ಪೊಲೀಸರು ಬಂಧಿಸಿ ಮುಂದಿನ ತನಿಖೆ ಕೈಗೊಂಡಿದ್ದಾರೆ.

# ಮೇ.25ರಂದು ಮುಂಗಾರು ಬೀಜ ದಿನೋತ್ಸವ

**ರಾಯಚೂರು,ಮೇ.24–** ಇಲ್ಲಿನ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ ಬೀಜ ಘಟಕದ ಆವರಣದಲ್ಲಿ ಮೇ.25ರ ಬೆಳಿಗ್ಗೆ 10 ಗಂಟೆಗೆ ಮುಂಗಾರು ಬೀಜ ದಿನೋತ್ಸವ–2025 ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದ್ದು, ರೈತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಯಶಸ್ವಿಗೊಳಿಸಬೇಕೆಂದು ವಿವಿಯ ಬೀಜ ಘಟಕದ ವಿಶೇಷಾಧಿಕಾರಿ ಡಾ.ಅರುಣಕುಮಾರ್ ಹೊಸಮನಿ ಅವರು ಕೋರಿದ್ದಾರೆ.



ಮುಂಗಾರು ಬೀಜ ದಿನೋತ್ಸವ–2025ರ ಕಾರ್ಯಕ್ರಮದಲ್ಲಿ ಮುಂಗಾರು ಬೆಳೆಗಳ ಬಗ್ಗೆ ಸಮಗ್ರ ತಾಂತ್ರಿಕ ಮಾಹಿತಿ, ಸುಧಾರಿತ ಬೀಜೋತ್ಪಾದನಾ ಮತ್ತು ರೈತರ ಸಹಬಾಗಿತ್ವದ ಬೀಜೋತ್ಪಾದನಾ ಕಾರ್ಯಕ್ರಮಗಳ ಬಗ್ಗೆ ಮಾಹಿತಿ, ವಿವಿಧ ವಿಷಯ ತಜ್ಞರು ಮತ್ತು ರೈತರ ಜೊತೆ ಚರ್ಚೆ, ಮುಂಗಾರು ಬೆಳೆಗಳ ಸುಧಾರಿತ ತಳಿಗಳ ಬೀಜ, ಜೈವಿಕ ಗೊಬ್ಬರ, ಕೀಟನಾಶಕಗಳು, ಅರಣ್ಯ, ತೋಟಗಾರಿಕೆ ಗಿಡಗಳ ಪ್ರದರ್ಶನ ಮತ್ತು ಮಾರಾಟ ಕುರಿತು ಮಾಹಿತಿ ನೀಡಲಾಗುತ್ತಿದ್ದು, ಕಾರ್ಯಕ್ರಮದಲ್ಲಿ ರೈತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಯಶಸ್ವಿಗೊಳಿಸಬೇಕೆಂದು ವಿವಿಯ ಬೀಜ ಘಟಕದ ವಿಶೇಷಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪ್ರಿಯಾಂಕ ಖರ್ಗೆ ವಿರುದ್ಧ ಅನಗತ್ಯ ಹೇಳಿಕೆ ಖಂಡನೀಯ

**ಕಲಬುರಗಿ,ಮೇ.24–** ಕಲಬುರಗಿ ಜಿಲ್ಲೆಯಲ್ಲಿ ಯಾವುದೇ ಅಹಿತಕರ ಘಟನೆ ನಡೆದರೂ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ ಖರ್ಗೆ ಮತ್ತು ಪೊಲೀಸ ಇಲಾಖೆಯ ಹೆಸರನ್ನು ಬಳಸಿಕೊಂಡು ಸಿದ್ದಲಿಂಗ ಸ್ವಾಮಿ ಆಂದೋಲಾ ಪ್ರಚಾರ ಗಿಟ್ಟಿಸಿಕೊಳ್ಳುತ್ತಿದ್ದಾರೆ.ಇಂತಹ ಅನಗತ್ಯ ಹೇಳಿಕೆ ಖಂಡನೀಯ ಎಂದು ದಲಿತ ಜನಾಕ್ರೋಶ ವೇದಿಕೆ ಮುಖಂಡ ದಶರಥ ಕಲಗುರ್ತಿ ಸುದ್ದಿಗೋಷ್ಠಿಯಲ್ಲಿ ಹೇಳಿದರು

ಮಾರ್ಚ 20 ರಂದು ಮಲ್ಲಯ್ಯ ಸ್ವಾಮಿ ನಂದಿಕೂರ ಮತ್ತು ಅವರ ಪತ್ನಿಯಿಂದ ಬೆದರಿಸಿ ಸುಮಾರು ರೂ. 20 ಲಕ್ಷ ಹಣ ಬ್ಯಾಂಕಿನಿಂದ ವಿತ್‌ಡ್ರಾ ಮಾಡಿಸಿಕೊಂಡಿದ್ದಾರೆಂದು ಫರಹತಾಬಾದ ಪೊಲೀಸ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು. ಆ ಪ್ರಕರಣದಲ್ಲಿ ಸುಮಾರು 9 ಜನರನ್ನು ಬಂಧಿಸಿ ವಿಚಾರಣೆ ಮಾಡಿ ಈಗಾಗಲೇ ಜೈಲಿಗೆ ಕಳುಹಿಸಿದ್ದಾರೆ. ಹಣ ಕೂಡಾ ರಿಕವರಿ ಮಾಡಿದ್ದಾರೆ. ಆದರೆ ಸಿದ್ದಲಿಂಗ ಸ್ವಾಮಿ ಅವರು ವಿನಾ: ಕಾರಣ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ ಖರ್ಗೆ ಮತ್ತು ಪೊಲೀಸ ಇಲಾಖೆಯ ಹೆಸರಿಗೆ ತೇಜೋವಧೆ ಮಾಡುತ್ತಿರುವುದು ಸಲ್ಲದು.

ಕಲಬುರಗಿ ಜಿಲ್ಲೆಯಲ್ಲಿ ದಲಿತರ ಕೊಲೆ, ಸುಲಿಗೆ ಅತ್ಯಾಚಾರ




ಪ್ರಕರಣ ನಡೆದರೂ ಕೂಡಾ ಸಿದ್ದಲಿಂಗ ಸ್ವಾಮಿಜೀ ದಲಿತರ ಬಗ್ಗೆ ಕಾಳಜಿ ವಹಿಸದೇ ಯಾವುದೇ ಹೋರಾಟ ಮಾಡಿರುವುದಿಲ್ಲ. ಇದರಿಂದ ಇವರೊಬ್ಬರು ಜಾತಿವಾದಿ ಸ್ವಾಮೀಜಿ ಎಂದು ಮೇಲ್ನೋಟಕ್ಕೆ ಕಂಡು ಬರುತ್ತದೆ.

ಕರ್ನಾಟಕ ರಾಜ್ಯದ ಯುವ ನಾಯಕ ಭವಿಷ್ಯದ ಮುಖ್ಯಮಂತ್ರಿ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ ಖರ್ಗೆ ವಿರುದ್ಧ ಪದೇ ಪದೇ ಅವಹೇಳನಕಾರಿ ಮತ್ತು ಹಗುರವಾಗಿ ಮಾತನಾಡುತ್ತಿರುವ ಆಂದೋಲ ಸ್ವಾಮಿಗಳ ವಿರುದ್ಧ ಪ್ರಕರಣ ದಾಖಲಿಸುವಂತೆ ಆಗ್ರಹಿಸಿದರು.ಸುದ್ದಿಗೋಷ್ಠಿಯಲ್ಲಿ ನಾಗು ಡಿ. ಗುಂಡಗುರ್ತಿ, ದತ್ತಾತ್ರೇಯ ಮುಡ್ಡಿ,ರೇವಣಸಿದ್ದ ಬುಜಂಗೆ ಇದ್ದರು.

# ತಂಬಾಕು ಉತ್ಪನ್ನ ಮಾರಾಟಕ್ಕೆ ಪರವಾನಿಗೆ ಕಡ್ಡಾಯ: ಡಾ.ಎಂ.ಡಿ.ಶಾಕೀರ್

**ರಾಯಚೂರು,ಮೇ.24–** ಇಲ್ಲಿನ ರಾಯಚೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ತಂಬಾಕು ಉತ್ಪನ್ನ ಮಾರಾಟ ಮಾಡಲು ಪ್ರತ್ಯೇಕ ಪರವಾನಿಗೆ ಪಡೆಯುವುದು ಕಡ್ಡಾಯೊಳಿಸಿರುವ ಹಿನ್ನಲೆಯಲ್ಲಿ ಪಾಲಿಕೆ ವ್ಯಾಪ್ತಿಯಲ್ಲಿ ತಂಬಾಕು ಉತ್ಪನ್ನ ಮಾರಾಟ ವ್ಯಾಪಾರಿಗಳು ಕಡ್ಡಾಯವಾಗಿ ಪ್ರತ್ಯೇಕವಾಗಿ ಪರವಾನಿಗೆಯನ್ನು ಪಡೆಯಬೇಕೆಂದು ಮಹಾನಗರ ಪಾಲಿಕೆಯ ಆರೋಗ್ಯ ಅಧಿಕಾರಿಗಳಾದ ಡಾ.ಎಂ.ಡಿ.ಶಾಕೀರ್ ಅವರು ತಿಳಿಸಿದ್ದಾರೆ.



ತಂಬಾಕು ಉತ್ಪನ್ನ ಮಾರಾಟ ಪಡೆಯಲು ಮಹಾನಗರ ಪಾಲಿಕೆಯಿಂದ ಅರ್ಜಿ ನಮೂನೆಯನ್ನು ಪಡೆದು ಆಧಾರ ಕಾರ್ಡ, ಬಾಡಿಗೆ ಕರಾರು ಪತ್ರ, ಉದ್ದಿಮೆ ಪರವಾನಿಗೆ ಹಾಗೂ ಫೋಟೋಗಳು ಸೇರಿದಂತೆ ಇತರೆ ಅಗತ್ಯ ಮಾಹಿತಿಯೊಂದಿಗೆ ಮೇ.31ರೊಳಗಾಗಿ ಅರ್ಜಿಯನ್ನು ಸಲ್ಲಿಸಬಹುದಾಗಿದೆ. ಶುಲ್ಕ 500 ರೂ.ಗಳಾಗಿದ್ದು 5 ವರ್ಷ ಚಾಲ್ತಿಯಲ್ಲಿರುತ್ತದೆ. ನಿಗದಿತ ದಿನಾಂಕದ ನಂತರ ಪರವಾನಿಗೆ ಪಡೆಯದೇ ತಂಬಾಕು ಉತ್ಪನ್ನಗಳ ಮಾರಾಟ ಮಾಡುವ ವ್ಯಾಪಾರಸ್ಥರ ಮೇಲೆ ಕಾನೂನು ಕ್ರಮವನ್ನು ಜರುಗಿಸಲಾಗುವುದು ಎಂದು ರಾಯಚೂರು ಮಹಾನಗರ ಪಾಲಿಕೆಯ ಆರೋಗ್ಯ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜೋಳ ಖರೀದಿ ಕೇಂದ್ರದ ಅವ್ಯವಸ್ಥೆ ವಿರುದ್ಧ ಹೆದ್ದಾರಿಯಲ್ಲಿ ಕುಳಿತು ಮಾಜಿ ಶಾಸಕರಿಂದ ಪ್ರತಿಭಟನೆ

**ಸಿರುಗುಪ್ಪ, ಮೇ.24–** ನಗರದ ಸಿಂಧನೂರು ರಸ್ತೆಯಲ್ಲಿರುವ ಜೋಳ ಖರೀದಿ ಕೇಂದ್ರದಲ್ಲಿ ಈಗಾಗಲೇ ಖರೀದಿಸಲಾದ ಜೋಳವನ್ನು ಗೋದಾಮಿಗೆ ಕಳುಹಿಸಲು ಕ್ರಮ ತೆಗೆದುಕೊಳ್ಳಬೇಕು, ಬಂದ್ ಆಗಿರುವ ಜೋಳ ಖರೀದಿಯ ಲಾಗಿನ್ ತೆರೆಯಲು ಕ್ರಮ ತೆಗೆದುಕೊಳ್ಳಬೇಕು, ಮೊಳಕೆ ಬಂದ ಜೋಳದ ಚೀಲಗಳನ್ನು ಬದಲಾಯಿಸಲು ಖರೀದಿ ಕೇಂದ್ರದವರೇ ಜವಾಬ್ದಾರಿ ತೆಗೆದುಕೊಳ್ಳಬೇಕೆಂದು ಒತ್ತಾಯಿಸಿ ಬಿ.ಜೆ.ಪಿ. ತಾಲೂಕು ಘಟಕದ ವತಿಯಿಂದ ಮಾಜಿ ಶಾಸಕ ಎಂ.ಎಸ್.ಸೋಮಲಿಂಗಪ್ಪ ನೇತೃತ್ವದಲ್ಲಿ ಕಾರ್ಯಕರ್ತರು, ವಿವಿಧ ಗ್ರಾಮಗಳ ರೈತರು ರಾಷ್ಟ್ರೀಯ ಹೆದ್ದಾರಿ 150ಎ ರಲ್ಲಿ ಕುಳಿತು ಸರ್ಕಾರದ ವಿರುದ್ಧ ಪ್ರತಿಭಟನೆ ವ್ಯಕ್ತಪಡಿಸಿದರು.

ಜೋಳ ಖರೀದಿ ಪ್ರಕ್ರಿಯೆಯನ್ನು ತ್ವರಿತವಾಗಿ ಮುಗಿಸಬೇಕು, ಖರೀದಿಸಿದ ಜೋಳಕ್ಕೆ ಸಕಾಲಕ್ಕೆ ಹಣವನ್ನು ಪಾವತಿಸಬೇಕು,



ಮಳೆಗಾಲ ಆರಂಭವಾಗಿದ್ದು, ರೈತರು ತಂದ ಜೋಳವನ್ನು ಗೋದಾಮುಗಳಲ್ಲಿ ಸುರಕ್ಷಿತವಾಗಿಡಬೇಕು, ಖರೀದಿ ಪ್ರಕ್ರಿಯೇ ಸ್ಥಗಿತಗೊಂಡಿದ್ದು, ಶೀಘ್ರವೇ ಖರೀದಿಗೆ ಕ್ರಮ ತೆಗೆದುಕೊಳ್ಳಬೇಕೆಂದು ರೈತರು ಘೋಷಣೆಗಳನ್ನು ಕೂಗಿ ತಮ್ಮ ಆಕ್ರೋಷವನ್ನು ವ್ಯಕ್ತಪಡಿಸಿದರು.

ಮಾಜಿ ಶಾಸಕ ಎಂ.ಎಸ್.ಸೋಮಲಿಂಗಪ್ಪ ಮಾತನಾಡಿ, ಸರ್ಕಾರದ ನಿರ್ಲಕ್ಷ್ಯದಿಂದಾಗಿ ಜೋಳ ಖರೀದಿ ಪ್ರಕ್ರಿಯೆ ಸ್ಥಗಿತಗೊಂಡಿದೆ, ಮಾರಾಟಕ್ಕಾಗಿ ಜೋಳವನ್ನು ತಂದಿರುವ ರೈತರು ಖರೀದಿ ಕೇಂದ್ರದ ಬಯಲಲ್ಲಿಯೇ ಹಾಕಿದ್ದಾರೆ. ರೈತರ ಜೋಳಕ್ಕೆ ಯಾವುದೇ ಸುರಕ್ಷತೆ ಇಲ್ಲ, ಒಂದೆಡೆ ಮಳೆ ಬರುತ್ತಿದೆ, ಈಗಾಗಲೇ ಬಂದ ಮಳೆಯಿಂದ ಜೋಳದ ಚೀಲಗಳಲ್ಲಿ ಮೊಳಕೆ ಬಂದಿವೆ, ಅತ್ತ ಖರೀದಿಯೂ ಮಾಡುತ್ತಿಲ್ಲ, ರೈತರ ಜೋಳಕ್ಕೆ ಸುರಕ್ಷತೆಯನ್ನು ನೀಡುತ್ತಿಲ್ಲ. ಇದರಿಂದಾಗಿ ಜೋಳ ಬೆಳೆದ ರೈತರು ಖರೀದಿ ಕೇಂದ್ರಕ್ಕೆ ಜೋಳ ತಂದಿದ್ದರೂ ಮಾರಾಟ ಮಾಡಲಾಗದ ಅಸಹಾಯಕ ಸ್ಥಿತಿಯಲ್ಲಿದ್ದಾರೆ. ಸರ್ಕಾರ ರೈತರ ಪರ ಎಂದು ಬರೀ ಬಾಯಿ ಮಾತಿನಲ್ಲಿ ಹೇಳುತ್ತಿದೆ, ಇದರಿಂದಾಗಿ ರೈತರಿಗೆ ಅನ್ಯಾಯವಾಗುತ್ತಿದೆ. ಆದ್ದರಿಂದ ರಸ್ತೆಮೇಲೆ ಕುಳಿತು ರೈತರು ಜೋಳ ಮಾರಾಟಕ್ಕಾಗಿ ಸರ್ಕಾರಕ್ಕೆ ಒತ್ತಾಯಿಸುವ ಸ್ಥಿತಿ ಬಂದಿದೆ ಎಂದು ಆರೋಪಿಸಿದರು.

Owned, Printed and published by **ANILKUMAR H** from Plot No. # 3-5-415/-A MANVI Pooja Rice Mill, Near Kataraki Road, Manvi Tq. Manvi, Dist, Raichur-584123, Printed at **MAA FRIENDS PRINTING PRESS,** Plot No. # 3-5-415/-A Pooja Rice Mill Near Kataraki Road, Manvi Tq. Manvi, Dist: Raichur-584123, State: Karnataka Editor: **ANILKUMAR H**